MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 37 | ಭಾನುವಾರ : 23-11-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 37 | SUNDAY : 23-11-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ರಜತ ಮಹೋತ್ಸವ ಸಂಭ್ರಮದಲ್ಲಿ ಜೆಡಿಎಸ್, ಬೆಳ್ಳಿ ನಾಣ್ಯ ಬಿಡುಗಡೆ



**ಬೆಂಗಳೂರು, ನ.22–** ಜೆಡಿಎಸ್ ಪಕ್ಷದ ರಜತ ಮಹೋತ್ಸವವನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ನಗರದ ಜೆ.ಪಿ.ಭವನದಲ್ಲಿಂದು ಉದ್ಘಾಟಿಸಿದರು.ಪಕ್ಷಕ್ಕೆ 25 ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಬೆಳ್ಳಿ ನಾಣ್ಯ, ಡಿಜಿಟಲ್ ಮಾಹಿತಿ ಒದಗಿಸುವ ಟೋಲ್ ನಂಬರ್ ಅನ್ನು ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಿದರು.

ಬಳಿಕ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಎಂ.ಕೃಷ್ಣಾರೆಡ್ಡಿ ಮಾತನಾಡಿ, 2028ರ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಪಕ್ಷ ಅಧಿಕಾರಕ್ಕೆ ಬಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಬೇಕು. ಆ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದರು.

2006ರಲ್ಲಿ ಕುಮಾರಸ್ವಾಮಿ ಅವರು ರೈತರ, ಮಹಿಳೆಯರ, ದಲಿತರ ಪರವಾದ ಕಾರ್ಯಕ್ರಗಳನ್ನು ನೀಡಿದ್ದರು. ಅಂತಹ ವಾತಾವರಣ ನೋಡಲು ಮತ್ತೆ ಅವರು ಮುಖ್ಯಮಂತ್ರಿಯಾಗಬೇಕು ಎಂದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 16 ಬಜೆಟ್ ಮಂಡಿಸಿದರೂ ಉತ್ತಮ ಆರ್ಥಿಕ ತಜ್ಞರಲ್ಲ. ಏಕೆಂದರೆ ರಾಜ್ಯದ ಸಮಗ್ರ ಅಭಿವೃದ್ಧಿ ಕುಂಠಿತವಾಗಿದೆ ಎಂದು ಅವರು ಹೇಳಿದರು. ಪ್ರತಿ ಸೋಮವಾರ ಮತ್ತು ಶುಕ್ರವಾರ ಕಚೇರಿಯಲ್ಲಿದ್ದು ಪಕ್ಷದ ಸೇವೆ ಮಾಡುವುದಾಗಿ ಅವರು ಪ್ರಕಟಿಸಿದರು.

ಮಾಜಿ ಶಾಸಕ ವೈ.ಎಸ್.ವಿ.ದತ್ತ ಮಾತನಾಡಿ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಹೋರಾಟದ ಮೂಲಕ ಜೆಡಿಎಸ್ ಪಕ್ಷ ಕಟ್ಟಿ ಬೆಳೆಸಿದ್ದಾರೆ. ಕಾವೇರಿ, ಕೃಷ್ಣಾ ನದಿ ನೀರಿನ ವಿಚಾರದಲ್ಲಿ ರೈತರೊಂದಿಗೆ ದೊಡ್ಡ ಹೋರಾಟ ಮಾಡಿ ದ್ದಾರೆ ಎಂದು ಹೇಳಿ ದೇವೇಗೌಡರ ಹೋರಾಟದ ಹಲವಾರು ಘಟನೆಗಳನ್ನು **(2ನೇ ಪುಟಕ್ಕೆ)**

## ಅಧಿಕಾರ ಹಂಚಿಕೆ ಹೈಕಮಾಂಡ್‌ಗೆ ಬಿಸಿತುಪ್ಪ

**ಬೆಂಗಳೂರು, ನ. 22–** ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಕದನ ಬಿರುಸಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕು ಮಾರ್ ಬಣಗಳು ಪೈಪೋಟಿಗೆ ಇಳಿದಿರು ವಾಗಲೇ ಹೈಕಮಾಂಡ್‌ನ ನಡೆ ಕುತೂಹಲ ಮೂಡಿಸಿದ್ದು, ಅಧಿಕಾರ ಹಂಚಿಕೆಯ ಕಗ್ಗಂಟಿಗೆ ಹೈಕಮಾಂಡ್ ಯಾವ ರೀತಿ ಮದ್ದು ಅರೆಯುತ್ತದೆ, ಯಾವ ಸೂತ್ರಗಳನ್ನು ರೂಪಿಸುತ್ತದೆ ಎಂಬುದು ಈಗ ಕೌತುಕ ಮೂಡಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದೆಯೂ ನಾನೇ ಸಿಎಂ ಎಂದು ಪುನರುಚ್ಚರಿಸಿರುವುದು, ಇದಕ್ಕೆ ಪ್ರತಿಯಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಶ್ ಯು ಆಲ್ ದಿ ಬೆಸ್ಟ್ ಎಂದು ಹೇಳಿರುವುದು ಅಧಿಕಾರ ಹಂಚಿಕೆ ಕದನದ ಜ್ವಾಲೆಗೆ ತುಪ್ಪ ಸುರಿದಂತಾಗಿದೆ. ಹಾಗಾಗಿ ಹೈಮಾಂಡ್ ಸಹ ಈಗ ಮಧ್ಯೆ ಪ್ರವೇಶಿಸುವ ಅನಿವಾರ್ಯ ಪರಿಸ್ಥಿತಿ ಸೃಷ್ಟಿಯಾಗಿದೆ.

ಪಕ್ಷ ಹಾಗೂ ಸರ್ಕಾರದ ಹಿತದೃಷ್ಟಿಯಿಂದ ಹೈಕಮಾಂಡ್ ಒಂದು ಸ್ಪಷ್ಟ ನಿರ್ಧಾರಕ್ಕೆ ಬರಲೇಬೇಕಾದ ಅನಿವಾರ್ಯತೆಯೂ ಇದೆ. ಹಾಗಾಗಿ ಹೈಕಮಾಂಡ್‌ನ ನಡೆಯತ್ತ ಎಲ್ಲರ ಚಿತ್ತ ನೆಟ್ಟಿದೆ.ಅಧಿಕಾರ ಹಂಚಿಕೆಯ ವಿಚಾರದಲ್ಲಿ ಹೈಕಮಾಂಡ್ ಯಾವ ತೀರ್ಮಾನ ಕೈಗೊಳ್ಳುತ್ತೆ ಎಂಬುದರ ಮೇಲೆ ರಾಜ್ಯದ ಮುಂದಿನ ರಾಜಕೀಯ ವಿದ್ಯಮಾನಗಳು ನಿಂತಿವೆ.



ಯಾರ ಪರ ತೀರ್ಮಾನ ಕೈಗೊಳ್ಳಬೇಕು ಎಂಬುದು ಈಗ ಹೈಕಮಾಂಡ್ ತಲೆನೋವಿಗೆ ಕಾರಣವಾಗಿದ್ದು, ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಇಬ್ಬರು ಬಣದವರಿಗೂ ಒಪ್ಪಿಗೆಯಾಗುವಂತಹ ರೀತಿಯಲ್ಲಿ, ಪಕ್ಷ ಮತ್ತು ಸರ್ಕಾರವನ್ನು ಕಾಪಾಡಿಕೊಳ್ಳಲು ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಇಬ್ಬರಿಗೂ ಸರ್ವ ಸಮ್ಮತವಾಗಿ ಸೂತ್ರವನ್ನು ರೂಪಿಸಬೇಕಾದ ಜವಾಬ್ದಾರಿ ಹೈಕಮಾಂಡ್‌ನ ಹೆಗಲೇರಿದೆ.

## ವಿವಿಧ ಹದಿನೈದು ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ನ.26 ರಂದು ಬೃಹತ್ ಬೆಂಗಳೂರು ಚಲೋ!

ಯುವಮಾರ್ಗ ಸುದ್ದಿ

**ಸಿಂದನೂರು,ನ.22–**ಸಂಯುಕ್ತ ಹೋರಾಟ ಕರ್ನಾಟಕ ವತಿಯಿಂದ ನ.26 ರಂದು ಕಾರ್ಮಿಕರ ವಿವಿಧ 15 ಬೇಡಿಕೆ ಈಡೇರಿಕೆಗಾಗಿ ಆಗ್ರಹಿಸಿ ರಾಜ್ಯವ್ಯಾಪಿ ಬೃಹತ್ ಬೆಂಗಳೂರು ಚಲೋ ಹಮ್ಮಿಕೊಳ್ಳಲಾಗಿದೆ ಎಂದು ಸಂಘಟನೆ ಮುಖಂಡರು ಹಾಗೂ ಕೃಷಿ ಬೆಲೆ ಆಯೋಗದ ಸದಸ್ಯರಾದ ಡಿ.ಎಚ್.ಪೂಜಾರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಚುನಾವಣೆಯಲ್ಲಿ ಕೊಟ್ಟಂತಹ ಭರವಸೆಗಳ ಬಗ್ಗೆ ನ.26 ಸಂವಿಧಾನ ದಿನದಂದು ಸಂಬಂಧಪಟ್ಟ ಸಚಿವರು ಸ್ಪಷ್ಟ ನಿರ್ಧಾರ ಕೊಡಬೇಕು. ರೈತರ, ಕಾರ್ಮಿಕರ, ಮಹಿಳೆಯರ, ದುಡಿಯುವ ವರ್ಗದ ವಿರೋಧಿ ಪಕ್ಷವಾದ ಬಿಜೆಪಿ ಪಕ್ಷವನ್ನು ಜನ ತಿರಸ್ಕರಿಸಿ, ಜನ ಕಾಂಗ್ರೆಸ್ಸಿಗೆ ಅಧಿಕಾರ ಕೊಟ್ಟಿದ್ದಾರೆ. ಅಧಿಕಾರ ಅನುಭವಸುತ್ತಿರುವ ಕಾಂಗ್ರೆಸ್ ಪಕ್ಷ ಏನು ಮಾಡುತ್ತಿದೆ ಎಂದು ಪ್ರಶ್ನಿಸಿದರು.

ಬಗರ್ ಹುಕುಂ ವಿಷಯವಾಗಿ ರೈತರಿಗೆ



ಒನ್ ಟೈಮ್ ಸೆಟಲಮೆಂಟ್ ಭೂಮಿ ಮಂಜೂರು ಮಾಡಬೇಕು. ಬೆಂಬಲ ಬೆಲೆ ಘೋಷಣೆ ಮಾಡಬೇಕು. ಮೈಕ್ರೋ ಫೈನಾನ್ಸ್‌ಗಳಿಂದ ಸಾಲ ಕಿರಿಕಿರಿಕೊಡದಂತೆ ಆದೇಶ ಮಾಡಬೇಕು. ವಿದ್ಯುತ್ ಖಾಸಗೀಕರಣ ಆಗಬಾರದು, **(2ನೇ ಪುಟಕ್ಕೆ)**

## ಸಿಸಿ ರಸ್ತೆ ಕಾಮಗಾರಿ ಪರಿಶೀಲಿಸಿದ ಶಾಸಕ ಮಾನಪ್ಪ ವಜ್ಜಲ್



ಯುವಮಾರ್ಗ ಸುದ್ದಿ

**ಲಿಂಗಸುಗೂರು,ನ.22–** ಪಟ್ಟಣದ ಬಸವಸಾಗರ ಕ್ರಾಸ್‌ನಿಂದ ಗಡಿಯಾರ ವೃತ್ತದವರೆಗೆ ನಡೆದಿರುವ ಸಿಸಿ ರಸ್ತೆ ಕಾಮಗಾರಿಯನ್ನು ಶಾಸಕ ಮಾನಪ್ಪ ವಜ್ಜಲ್ ಶುಕ್ರವಾರ ಪರಿಶೀಲಿಸಿದರು.

ಗಡಿಯಾರ ವೃತ್ತದ ಮೂಲಕ ಸಾಗುವ ಎಲ್ಲಾ ರಸ್ತೆಗಳನ್ನು ಸಿಸಿ ಮಾಡಿಸಲಾಗುತ್ತಿದೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ 20 ಕೋಟಿ ಅನುದಾನ ಒದಗಿಸಿದ್ದೇನೆ.

ಕುಡಿಯುವ ನೀರಿನ ಕಾಮಗಾರಿ ನಡೆಯುತ್ತಿದ್ದರಿಂದ ಕೆಲವಡೆ ಸಿಸಿ ರಸ್ತೆ ಕಾಮಗಾರಿ ಆರಂಭಿಸಿಲ್ಲ' ಎಂದರು. 'ಉತ್ತಮ ಗುಣಮಟ್ಟ ಕಾಪಾಡಿ ಶೀಘ್ರವಾಗಿ ಸಾರ್ವಜನಿಕರ ಸುಗವು ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು' ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಬಿಜೆಪಿ ಮಂಡಲ ಅಧ್ಯಕ್ಷ ಕೆ.ನಾಗಭೂಷಣ, ಮುಖಂಡರಾದ ಗಿರಿಮಲ್ಲನಗೌಡ ಕರಡಕಲ್, ಭೀಮಣ್ಣ ಹಿರೇಮನಿ, ವೆಂಕನಗೌಡ ಗುಡದನಾಳ ಸೇರಿದಂತೆ ಅನೇಕರು ಇದ್ದರು.

## ರೈತರ ಶ್ರೇಯೋಭಿವೃದ್ಧಿಗೆ ಶ್ರಮಿಸುವೆ:ಮನೋಜ್ ಕುಮಾರ

ಯುವಮಾರ್ಗ ಸುದ್ದಿ

**ಮಾನ್ವಿ,ನ.22–** ತಾಲ್ಲೂಕಿನ ಕುರ್ಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ.ಕಾರ್ಯಾಲಯದಲ್ಲಿ ಶ್ರೀ ಮನೋಜ್ ಕುಮಾರ ಚಿಕ್ಕಗೌಡರ ಇವರ ಅಧ್ಯಕ್ಷತೆಯಲ್ಲಿ ಶ್ರೀಮಾನ್ ವಿಶ್ವಾನಾಥ ಪಾಟೀಲ್ ಅಧ್ಯಕ್ಷರು, ರಾಯಚೂರು ಮತ್ತು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿಯಮಿತ ರಾಯಚೂರು ಮತ್ತು ಶ್ರೀ ಸಚಿನ್, ಜಿಲ್ಲಾ ವ್ಯವಸ್ಥಾಪಕರು, ಇಫ್ಕೊ ನವದೆಹಲಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಭೆಯ ಉದ್ದೇಶಿಸಿ ಸಂಘದ ಅಧ್ಯಕ್ಷರಾದ ಶ್ರೀ ಮನೋಜ್ ಕುಮಾರ ಮಾತನಾಡಿ ನಮ್ಮ ಸಂಘದಲ್ಲಿ 8 ಜನ ರೈತ ಸದಸ್ಯರು ಮೃತ ಹೊಂದಿದ್ದು, ಅವರ ಸಾಲ ರೂ. 3.40 ಲಕ್ಷಗಳು ರಾಯಚೂರು ಮತ್ತು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿಯಮಿತ ರಾಯಚೂರು ಇವರು ಕೊಡು



ವ ಮರಣೋತ್ತರ ಪರಿಹಾರ ನಿಧಿ ಅಡಿಯಲ್ಲಿ ಲಾಭಪಡೆದಿದ್ದಾರೆ. ಸದರಿ ಪರಿಹಾರ ಪಡೆದ ನಮ್ಮ ಸಂಘದ ರೈತ ಸದಸ್ಯರ ಪರವಾಗಿ ನಾವುಗಳು ಶ್ರೀ ವಿಶ್ವಾನಾಥ ಪಾಟೀಲ್ ಅಧ್ಯಕ್ಷರು ಆರ್.ಕೆ.ಡಿ.ಡಿ.ಸಿ ಬ್ಯಾಂಕ್ ಇವರನ್ನು ಸನ್ಮಾನಿಸಿದರು.ಅದರಂತೆ ನಮ್ಮ ಸಂಘವು ಪ್ರಸಕ್ತ ಸಾಲಿನಲ್ಲಿ ಒಟ್ಟು 2.21 ಕೋಟಿ ಮೊತ್ತದ ಗೊಬ್ಬರ ಮಾರಾಟ ಮಾಡಿದ್ದು, ಈ ಪೈಕಿ 21 ಲಕ್ಷ ರೂ. ಗಳ ದ್ರವ ರೂಪದ ಗೊಬ್ಬರ ಮಾರಾಟ ಮಾಡಿದ್ದರಿಂದ ಜಿಲ್ಲಾ ವ್ಯವಸ್ಥಾಪಕರು ಇಫ್ಕೊ ನವದೆಹಲಿ ಇವರನ್ನು ಸನ್ಮಾನಿಸಿದರು. ನಂತರದಲ್ಲಿ ಮಾತನಾಡಿದ ಅವರು ಆರ್.ಕೆ.ಡಿ.ಸಿ.ಸಿ ಬ್ಯಾಂಕ್ ಅಧ್ಯಕ್ಷರು, ನಮ್ಮ ಬ್ಯಾಂಕ್ ರೈತರ ಪರವಾಗಿದ್ದು, ರೈತರ ಏಳಿಗೆಗಾಗಿ ಶ್ರಮಿಸಲಾಗುತ್ತಿದೆ. ಇತ್ತಿಚೀನ ದಿನಗಳಲ್ಲಿ ಸಾಲ ಪಡೆದ ರೈತರು ತಮ್ಮ ಆರ್ಥಿಕ ದೌರ್ಬಲ್ಯದಿಂದ ಸರಿಯಾದ ಸಮಯಕ್ಕೆ ಸಾಲ ತೀರಿಸಲು ಪರದಾಡುತ್ತಿದ್ದಾರೆ.

ಕುಟುಂಬ ನಿರ್ವಹಣೆ ಮಾಡುವ ರೈತ ಆಕಸ್ಮಿಕ ಮರಣ ಹೊಂದಿದರೆ, ಅವರ ಕುಟುಂಬ ಆರ್ಥಿಕವಾಗಿ ದುರ್ಬಲಗೊಳ್ಳುವುದನ್ನು ಮನಗಂಡು ಈ ಯೋಜನೆಯಲ್ಲಿ ಜಾರಿಗೆ ತರಲಾಗಿದೆ. ಈ ಯೋಜನೆಯು ರೈತ ಕುಟುಂಬಕ್ಕೆ ಆರ್ಥಿಕವಾಗಿ ಸಾಂತ್ವಾನ ನೀಡಿದಂತಾಗುತ್ತದೆ ಎಂದು ತಿಳಿಸಿದರು, ಅದರಂತೆಯೆ ಕುರ್ಡಿ ಪ್ರಾಥಮಿಕ ಕೃಷಿ ಸಂಘವು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಆಡಳಿತ ಮಂಡಳಿ ಮತ್ತು ಸಿಬ್ಬಂಧಿಗಳ ಕಾರ್ಯವನ್ನು ಶ್ಲಾಘಿಸಿದರು.

## ರಾಜ್ಯದ ಹಲವು ಪೊಲೀಸ್ ಠಾಣೆಗಳಿಗೆ ಬೇಕಾಗಿದ್ದ ನಟೋರಿಯಸ್ ಕಳ್ಳ ಅರೆಸ್ಟ್, ಮೊಬೈಲ್ ಬಳಸದೆಯೇ ಕೃತ್ಯ ಎಸಗುತ್ತಿದ್ದ ಖದೀಮ!



ಯುವಮಾರ್ಗ ಸುದ್ದಿ

**ರಾಯಚೂರು,ನ.22–** ರಾಜ್ಯದಲ್ಲಿ ಪದೇ ಪದೇ ಅಪರಾಧಗಳ ಸಂಖ್ಯೆ ಹೆಚ್ಚಾಗುತ್ತಿದೆ ಅನ್ನೋ ಆರೋಪ ಕೇಳಿಬರುತ್ತಾ ಇದೆ. ಇದೀಗ ಅಂತಹದ್ದೇ ನಟೋರಿಯಸ್ ವ್ಯಕ್ತಿಯನ್ನ ಪೊಲೀಸರು ಲಾಕ್ ಮಾಡಿ ಕಂಬಿ ಹಿಂದೆ ತಳ್ಳಿದ್ದಾರೆ. ರಾಜ್ಯದ 6 ಪೊಲೀಸ್ ಠಾಣೆಗಳಿಗೆ ಬೇಕಾಗಿದ್ದ ಖತರ್ನಾಕ್ ಮನೆಗಳ್ಳನನ್ನು ಬಂಧಿಸುವಲ್ಲಿ ರಾಯಚೂರು ಪೊಲೀಸರು ಯಶಸ್ವಿಯಾಗಿದ್ದಾರೆ.

ರಾಮಕೃಷ್ಣ ಅಲಿಯಾಸ್ ಗುಜ್ಜಲು ರಾಮಕೃಷ್ಣ ಬಂಧಿತ ಆರೋಪಿ ಆಗಿದ್ದು, ಈತ ಆಂಧ್ರಪ್ರದೇಶದ ಧರ್ಮಾವರಂ ಮೂಲದವನು.

ರಾಮಕೃಷ್ಣ ಅಲಿಯಾಸ್ ಗುಜ್ಜಲು ರಾಮಕೃಷ್ಣ ರಾಯಚೂರು, ಗೌರಿಬಿದನೂರು, ಹಿರಿಯೂರು & ಹಾವೇರಿ ಸೇರಿದಂತೆ ಗಂಗಾವತಿ ಹಾಗೂ ಶಿರಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸಾಕಷ್ಟು ಅಪರಾಧ ಎಸಗಿದ್ದ. ಮೋಸ್ಟ್ ವಾಂಟೆಂಡ್ ಮನೆಗಳ್ಳನಾಗಿದ್ದ ರಾಮಕೃಷ್ಣ ಮೊಬೈಲ್ ಬಳಸದೆಯೇ, ರೈಲು ಮೂಲಕ ಟಾರ್ಗೆಟ್ ಮಾಡಿದ್ದ ಸಿಟಿಗೆ ಹೋಗಿ ಬರುತ್ತಿದ್ದ, ಅಲ್ಲದೆ ಪ್ರಮುಖವಾಗಿ ಭಿಕ್ಷುಕನ ರೀತಿ ಏರಿಯಾ ಪೂರ್ತಿ ಓಡಾಡಿ ಮಾಹಿತಿ ಸಂಗ್ರಹ ಮಾಡಿ ಕಳ್ಳತನ ಮಾಡುತ್ತಿದ್ದ ಎಂಬ ಆರೋಪವನ್ನ ಮಾಡಲಾಗಿದೆ.

ನಟೋರಿಯಸ್ ಮನೆಗಳ್ಳನ ಬಗ್ಗೆ ಪೊಲೀಸರು ಕೂಡ ಸಿಕ್ಕಾಪಟ್ಟೆ ತಲೆಕೆಡಸಿಕೊಂಡು ವಿಚಾರಣೆ ನಡೆಸಿದ್ದು, ಇದೀಗ ರಾಮಕೃಷ್ಣ ಅಲಿಯಾಸ್ ಗುಜ್ಜಲು ರಾಮಕೃಷ್ಣ ಕಂಬಿ ಹಿಂದೆ ಬಿದ್ದಿದ್ದಾನೆ. ಬಂಧಿತ ರಾಮಕೃಷ್ಣನಿಂದ 36 ಲಕ್ಷ ಮೌಲ್ಯದ 315 ಗ್ರಾಂ ಚಿನ್ನಾಭರಣ ಜಪ್ತಿ ಮಾಡಲಾಗಿದೆ.

ಹಾಗೇ ಮನೆಗಳ್ಳತನ ಬಳಿಕ ಚಿನ್ನಾಭರಣ ಖಾಸಗಿ ಬ್ಯಾಂಕ್‌ನಲ್ಲಿ ಅಡವಿಟ್ಟು ರಾಮಕೃಷ್ಣ ಹಣ ಪಡೆದಿದ್ದ. ಬಳಿಕ ಮತ್ತೆ ಕಳ್ಳತನ ಮಾಡಿಕೊಂಡು ಓಡಾಡುತ್ತಿದ್ದು, ರಾಯಚೂರು ನಗರದ ಎಲ್‌ಐಸಿ ಅಧಿಕಾರಿ ಮನೆಯಲ್ಲಿ ನಡೆದ ಕಳ್ಳತನ ಪ್ರಕರಣದಲ್ಲೂ ಈತನ ಪಾತ್ರವಿದೆ ಎಂದು ಆರೋಪ ಮಾಡಲಾಗಿದೆ.

## ವಿಜಯ ಕರ್ನಾಟಕ ರಕ್ಷಣಾ ವೇದಿಕೆಯಿಂದ ಸ್ವಾಭಿಮಾನಿ ಕನ್ನಡಿಗನ ಹಬ್ಬ



ಯುವಮಾರ್ಗ ಸುದ್ದಿ

**ಮಾನ್ವಿ,ನ.22–** ಪಟ್ಟಣದ ಎ.ಪಿ.ಎಂ.ಸಿ. ಬಯಲು ಸಭಾಂಗಣದಲ್ಲಿ ವಿಜಯ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಮತ್ತು ತಾಲೂಕು ಘಟಕದ ವತಿಯಿಂದ ನಡೆದ ಸ್ವಾಭಿಮಾನಿ ಕನ್ನಡಿಗನ ಹಬ್ಬ ಕಾರ್ಯಕ್ರಮವನ್ನು ಚಿಕಲಪರ್ವಿಯ ಶ್ರೀ ಸದಾಶಿವ ಮಹಾಸ್ವಾಮಿಗಳು ಉದ್ಘಾಟಿಸಿ ಆರ್ಶೀವಾಚನ ನೀಡಿ ವಿಶ್ವದ ಅತ್ಯಂತ ಪ್ರಾಚೀನ ಭಾಷೆಗಳಲ್ಲಿ ಕನ್ನಡ ಭಾಷೆ ಕೂಡ ಒಂದು ಇಂತಹ ಸಮೃದ್ಧ ಭಾಷ ಪರಂಪರೆಯನ್ನು ನಾವೆಲ್ಲರು ಕೂಡ ಉಳಿಸಿಕೊಂಡು ಹೋಗುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ರಾಜ್ಯದಾಧ್ಯಂತ ನವಂಬರ್ ತಿಂಗಳಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ ಮಾಡಿದರೆ ಬೆಳಗಾವಿಯಲ್ಲಿ ಕರಾಳದಿನವಾಗಿ ಆಚರಿಸಲಾಗುತ್ತದೆ ಇದ್ದಕ್ಕೆ ನಮ್ಮ ಸರ್ಕಾರ ಗಡಿ **(2ನೇ ಪುಟಕ್ಕೆ)**

ಮೊದಲನೇಯ ಪುಟದಿಂದ

# ಅಧಿಕಾರ ಹಂಚಿಕೆ ಹೈಕಮಾಂಡ್‌ಗೆ ಬಿಸಿತುಪ್ಪ

ಅತ್ಯಂತ ನಾಜೂಕಾಗಿ ಎಲ್ಲವನ್ನು ನಿಭಾಯಿಸಬೇಕಾದ ಸೂಕ್ಷ್ಮ ಸ್ಥಿತಿಯಲ್ಲಿ ಹೈಕಮಾಂಡ್ ಇದೆ. ಹಾಗಾಗಿ ಹೈಕಮಾಂಡ್ ಎಲ್ಲವನ್ನು ಅಳೆದು ತೂಗಿ ತೀರ್ಮಾನ ಪ್ರಕಟಿಸಲು ಸ್ವಲ್ಪ ಕಾಲಾವಕಾಶ ತೆಗೆದುಕೊಳ್ಳು ಸಾಧ್ಯತೆಗಳು ಹೆಚ್ಚಿವೆ.

ರಾಜ್ಯ ಕಾಂಗ್ರೆಸ್‌ನ ಅಧಿಕಾರ ಹಂಚಿಕೆಯ ಕದನಕ್ಕೆ ಮದ್ದು ಅರೆಯಲೇ ಬೇಕಾದ ಪರಿಸ್ಥಿತಿ ಸೃಷ್ಟಿಯಾಗಿದ್ದು, ಹೈಕಮಾಂಡ್ ಯಾವ ರೀತಿ ಅಧಿಕಾರ ಹಂಚಿಕೆಯ ಕದನಕ್ಕೆ ವಿರಾಮ ಹಾಡುತ್ತದೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರನ್ನು ಸಮಾಧಾನಿಸಲು ಯಾವ ಸೂತ್ರಗಳನ್ನು ಹೆಣೆಯಲಿದೆ ಎಂಬುದರತ್ತ ಎಲ್ಲರ ಚಿತ್ತ ಹರಿದಿದೆ.

ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಪೈಪೋಟಿ ನಿರ್ಣಾಯಕ ಹಂತ ತಲುಪಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎರಡೂ ಬಣಗಳು ಪರಸ್ಪರ ಸ್ಪರ್ಧೆಯ ಅಖಾಡಕ್ಕೆ ಇಳಿದಿರುವಾಗಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬೆಂಗಳೂರಿಗೆ ಬಂದಿದ್ದು, ಎರಡೂ ಬಣಗಳನ್ನು ಸಮಾಧಾನಿಸಲು ಯಾವ ಪರಿಹಾರವನ್ನು ಕೊಡುತ್ತಾರೆ ಎಂಬುದರತ್ತ ಎಲ್ಲರ ಗಮನ ಕೇಂದ್ರೀಕೃತವಾಗಿದೆ.

# ರಜತ ಮಹೋತ್ಸವ ಸಂಭ್ರಮದಲ್ಲಿ ಜೆಡಿಎಸ್, ಬೆಳ್ಳಿ ನಾಣ್ಯ ಬಿಡುಗಡೆ

ಉಲ್ಲೇಖಿಸಿದರು. ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮಾತನಾಡಿ, ರಾಜ್ಯದ ಸರ್ವತೋಮುಖ ಅಭಿವೃದ್ಧಿ ದೃಷ್ಟಿಯಿಂದ ಪಕ್ಷವನ್ನು ಸ್ವತಂತ್ರವಾಗಿ ಅಧಿಕಾರಕ್ಕೆ ತರಲು ಮತ್ತು ಮತ್ತೆ ಕುಮಾರಸ್ವಾಮಿ ಅವರನ್ನು ಮುಖ್ಯಮಂತ್ರಿ ಮಾಡಲು ಶ್ರಮಿಸೋಣ ಎಂದು ಕರೆ ನೀಡಿದರು. ಪಕ್ಷ ಸಂಘಟನೆಯ ಎರಡನೇ ಹಂತದ ಪ್ರವಾಸವನ್ನು ಶೀಘ್ರವಾಗಿ ಪ್ರಾರಂಭಿಸಲಾಗುವುದು. ಸಮಿಶ್ರ ಸರ್ಕಾರದ ಒತ್ತಡದಲ್ಲೂ ಜನಪರ ಕಾರ್ಯಕ್ರಮಗಳನ್ನು ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿ ನೀಡಿದ್ದಾರೆ. ಅವರ ಪುತ್ರನಾಗಿರುವುದೇ ನನ್ನ ಪೂರ್ವ ಜನದ ಪುಣ್ಯ ಎಂದರು.

ರಾಜ್ಯಾಧ್ಯಕ್ಷ ಸ್ಥಾನವನ್ನು ಕುಮಾರಣ್ಣ ಅವರಿಗಿಂತ ಬೇರೆ ಯಾರಿಂದಲೂ ತುಂಬಲು ಸಾಧ್ಯವಿಲ್ಲ . ರಾಜ್ಯಾಧ್ಯಕ್ಷರಾಗಿ ಪುನರಾಯ್ಕೆಯಾಗಿರುವುದಕ್ಕೆ ಅವರನ್ನು ಅಭಿನಂದಿಸುತ್ತೇನೆ. ಬಹಳಷ್ಟು ಜನರು ಪಕ್ಷವನ್ನು ಕಟ್ಟಿ ಬೆಳೆಸಿದ್ದಾರೆ. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಈ ದಿನ ಐತಿಹಾಸಿಕ ದಿನವಾಗಿದೆ ಎಂದು ಅವರು ಹೇಳಿದರು.

ಜೆ.ಪಿ.ಭವನ ನಮೆಲ್ಲರ ದೇವಾಲಯವಿದ್ದಂತೆ. ಹಾಗಾಗಿ ಬೆಳ್ಳಿಹಬ್ಬವನ್ನು ಈ ಭವನದಲ್ಲೆ ಮಾಡಲು ದೇವೇಗೌಡರು, ಕುಮಾರಣ್ಣ ನಿರ್ಧಾರ ಮಾಡಿದ್ದಾರೆ. ಅಧಿಕಾರ ಇರಲಿ, ಇಲ್ಲದಿದ್ದರೆ, ಜನರ, ರೈತರ ಪರ ಹೋರಾಟ ಮಾಡಿ ಪಕ್ಷ ಕಟ್ಟಿ ಬೆಳೆಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಹಣಕಾಸು ಸಚಿವರಿಂದ ಉಪ ಮುಖ್ಯಮಂತ್ರಿ ಸ್ಥಾನದವರೆಗೂ ಬೆಳೆಸಿದ್ದು ಜೆಡಿಎಸ್. ಬೆಳೆದು ಬಂದ ದಾರಿ ಮರೆತಿದ್ದಾರೆ ಎಂದು ಟೀಕಿಸಿದರು.

**ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ**–ಎಚ್.ಡಿ.ಕುಮಾರಸ್ವಾಮಿ, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್‌ಬಾಬು, ಮಾಜಿ ಸಚಿವರಾದ ಲೀಲಾದೇವಿ ಆರ್ ಪ್ರಸಾದ್, ಹೆಚ್.ಕೆ.ಕುಮಾರಸ್ವಾಮಿ, ಬಂಡೆಪ್ಪ ಕಾಶೆಂಪೂರ್, ಆಲ್ಕೊಡು ಹನುಮಂತಪ್ಪ, ಶಾಸಕರಾದ ಜಿ.ಟಿ.ಹರೀಶ್‌ಗೌಡ, ಕರೆಮ, ಟಿ.ಎ.ಶರವಣ, ಟಿ.ಎನ್.ಜವರಾಯಿಗೌಡ, ಮಾಜಿ ಶಾಸಕರಾದ ಡಾ.ಅನ್ನದಾನಿ, ರಮೇಶ್‌ಗೌಡ, ತಿಪ್ಪೆಸ್ವಾಮಿ, ಚೌಡರೆಡ್ಡಿ, ಪಕ್ಷದ ರಾಷ್ಟ್ರಿಯ ಕಾರ್ಯಕಾರಿ ಸಮಿತಿ ಸದಸ್ಯರು, ವಿವಿಧ ರಾಜ್ಯಗಳ ಪಕ್ಷದ ಪದಾಧಿಕಾರಿಗಳು, ಮೊದಲಾದ ಮುಖಂಡರು ಭಾಗವಹಿಸಿದ್ದರು.

# ರೈತರ ಶ್ರೇಯೋಭಿವೃದ್ಧಿಗೆ ಶ್ರಮಿಸುವೆ:ಮನೋಜ್ ಕುಮಾರ

ಜಿಲ್ಲಾ ವ್ಯವಸ್ಥಾಪಕರಾದ ಶ್ರೀ ಸಚಿನ್ ಇಫ್ಕೋ ನವದೆಹಲಿ ಇವರು ಮಾತನಾಡಿ ಕೇಂದ್ರ ಸರ್ಕಾರವು ಯೂರಿಯಾ ಗೊಬ್ಬರದ ಬಳಕೆಯನ್ನು ಕಡಿಮೆ ಮಾಡಲು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ನಮ್ಮ ರೈತರು ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಯೂರಿಯಾ ಗೊಬ್ಬರವನ್ನು ಬಳಸುತ್ತಿದ್ದಾರೆ. ಯೂರಿಯಾ ಗೊಬ್ಬರದ ಬಳಕೆಯನ್ನು ಮಿತಿಯಾಗಿಸಲು ನ್ಯಾನೋ ಯೂರಿಯಾ, ನ್ಯಾನೋ ಡಿ.ಎ.ಪಿ ದ್ರವ ರೂಪದ ಗೊಬ್ಬರಗಳನ್ನು ಕೇಂದ್ರ ಸರ್ಕಾರವು ಉತ್ತೇಜಿಸುತ್ತಿದೆ. ಹೀಗಾಗಿ ಕುರ್ಡಿ ಸಂಘವು ಸದರಿ ಸಾಲಿನಲ್ಲಿ ಒಟ್ಟು 21.00 ಲಕ್ಷ ರೂ.ಗಳ ದ್ರವ ರೂಪದ ಗೊಬ್ಬರ ಮಾರಾಟ ಮಾಡಿದ್ದು, ಜಿಲ್ಲೆಯಲ್ಲಿ ಮಾದರಿಯಾಗಿದೆ ಎಂದು ತಮ್ಮ ಅಭಿಪ್ರಾಯ ಪಟ್ಟರು.

ಸಭೆಯಲ್ಲಿ ಸಂಘದ ನಿರ್ದೇಶಕರಾದ ಶ್ರೀ ಭೀಮಯ್ಯ ಇವರು ಮಾತನಾಡುತ್ತಾ, ರಾ.ಜಿ.ಕೆ.ಸ.ಬ್ಯಾಂಕ್ ಅಧ್ಯಕ್ಷರು ಅನುಷ್ಠಾನಗೊಳಿಸಿದ ಮರಣೋತ್ತರ ಪರಿಹಾರ ನಿಧಿ ಯೋಜನೆಯು ದುರ್ಬಲ ವರ್ಗದ ರೈತರಿಗೆ ಆರ್ಥಿಕ ಬಲ ನೀಡಿದಂತಾಗುತ್ತದೆ. ಇದು ರಾಜ್ಯದಲ್ಲಿ ರೈತರಿಗೆ ಮಾದರಿ ಯೋಜನೆ ಎಂದು ಅಭಿಪ್ರಾಯ ಪಟ್ಟರು. ಅದರಂತೆ ಮಾನ್ಯ ಅಧ್ಯಕ್ಷರು ಇವರ ಮಾರ್ಗದರ್ಶನದಲ್ಲಿ ಕೇಂದ್ರ ಸರ್ಕಾರದ ಒನ್ ನೇಷನ್ ಒನ್ ಸಾಫ್ಟವೇರ್ ಯೋಜನೆ ಅಡಿಯಲ್ಲಿ ನಮ್ಮ ಜಿಲ್ಲೆಯು ರಾಜ್ಯದಲ್ಲಿ 2 ಸ್ಥಾನ ಪಡೆದಿರುವುದು ಹೆಮ್ಮೆಯ ವಿಷಯ ಎಂದು ತಿಳಿಸಿದರು.

ಅದರಂತೆಯ ಮಾನ್ಯ ಅಧ್ಯಕ್ಷರು ಇವರ ಮಾರ್ಗದರ್ಶನದಲ್ಲಿ ಯುವ ನಿರ್ದೇಶಕರುಗಳಿಗೆ, ಸಿಬ್ಬಂಧಿಗಳಿಗೆ ತರಬೇತಿ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡು ಉತ್ತೇಜಿಸುವರು ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡುತ್ತಾ, ಶ್ರೀ ಪ್ರವೀಣ ಕುಮಾರ ಮಾತನಾಡಿ ಆರ್.ಕೆ.ಡಿ.ಸಿ.ಸಿ ಬ್ಯಾಂಕ್ ನೀಡುವ ಬೆಳೆ ಸಾಲ ಇನ್ನು ಹೆಚ್ಚಿಗೆ ನೀಡಬೇಕೆಂದು ಕೋರಿಕೊಂಡರು.

ಸಭೆಯಲ್ಲಿ ಮುಖಂಡರಾದ ಶ್ರೀ ಜಬ್ಬರಸಾಬ ಮಾತನಾಡಿ ನಮ್ಮ ಗ್ರಾಮದಲ್ಲಿ ಜಾತಿ, ಧರ್ಮ ಬದಿಗಿಟ್ಟು ಸೌಹಾರ್ದಯುತವಾಗಿ ಗ್ರಾಮದ ಏಳಿಗೆಯಲ್ಲಿ ಭಾಗವಹಿಸಬೇಕು ಎಂದು ಹೇಳಿದರು. ಅದರಂತೆ ಗ್ರಾಮ ಪಂಚಾಯತ ಅಧ್ಯಕ್ಷರಾದ ಶ್ರೀ ರಮೇಶ ಇವರು ಮಾತನಾಡುತ್ತಾ ಒಂದು ಗ್ರಾಮವು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಮುಂದುವರೆಯಬೇಕಾದರೆ ಗ್ರಾಮದಲ್ಲಿ ಗ್ರಾಮ ಪಂಚಾಯತ, ಸಹಕಾರ ಸಂಘ ಮತ್ತು ಶಾಲೆಗಳ ಮುಖ್ಯ ಪಾತ್ರ ವಹಿಸುತ್ತವೆ. ಈ ಮೂರು ಸಂಸ್ಥೆಗಳು ಗ್ರಾಮಕ್ಕೆ ಅತ್ಯಂತ ಹೆಚ್ಚಿನ ಕೊಡುಗೆಗಳು ನೀಡುತ್ತವೆ ಎಂದು ಅಭಿಪ್ರಾಯ ಪಟ್ಟರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷರಾದ ಶ್ರೀ ಮನೋಜ್ ಕುಮಾರ ಚಿಕ್ಕೆಗೌಡರ್, ಉಪಾಧ್ಯಕ್ಷರಾದ ಶ್ರೀ ಯಲ್ಲಪ್ಪ ಗಟ್ಟು ಉಪಾಧ್ಯಕ್ಷರು, ನಿರ್ದೇಶಕರಾದ ಶ್ರೀ ಹಾಜೀ ಖಾಜಾರಹಮತಖಾನ್, ಶ್ರೀ ಬಸವರಾಜ ಗಟ್ಟು, ಶ್ರೀ ಅಬ್ದುಲ್ ರಜಾಕ್, ಶ್ರೀ ನಾಗರಾಜ ಹೂಗಾರ, ಶ್ರೀ ಭೀಮಯ್ಯ ಕೊಂಬಿನ್, ಶ್ರೀ ಸಣ್ಣ ಕರೆಪ್ಪ ಹೊಳೆಮ್ಮನವರ, ಶ್ರೀ ಗೋಪಾಲ ಯಾದವ, ಶ್ರೀಮತಿ ಸಾಜೀದಾಬೇಗಂ, ಶ್ರೀಮತಿ ಈರಮ್ಮ ತಿಕ್ಕಯ್ಯನಾಯಕ, ಶ್ರೀಮತಿ ಈರಮ್ಮ ಪೋಲಪ್ಪನವರ, ಸಂಘದ ಮಾಜಿ ಅಧ್ಯಕ್ಷರಾದ ಶ್ರೀ ರಾಯನಗೌಡ, ಶ್ರೀ ಎಲ್. ಬದರಿನಾರಾಯಣ, ಶ್ರೀ ನಾಗೇಶ ಬಜಾರ, ಮಾಜಿ ಉಪಾಧ್ಯಕ್ಷರಾದ ಶ್ರೀ ಹನೀಫ್ ಸಾಬ, ಗ್ರಾಮದ ಹಿರಿಯ ಮುಖಂಡರಾದ ಶ್ರೀ ಸೂಗಪ್ಪ ಸಾಹುಕಾರ, ಶ್ರೀ ವೆಂಕನಗೌಡ ಗೋರ್ಕಲ್, ಶ್ರೀ ಶಿವರಾಜಪ್ಪ ಪಾಟೀಲ್ ಸುಂಕೇಶ್ವರ ಮತ್ತು ಕುರ್ಡಿ, ಗೋರ್ಕಲ್, ಆರೋಲಿ, ಬೈಲ್ ಮರ್ಚೆಡ್, ಸುಂಕೇಶ್ವರ ಗ್ರಾಮದ ಎಲ್ಲಾ ರೈತ ಬಾಂಧವರಿಗೆ, ಅಂತಿಮವಾಗಿ ಸಭೆಯ ವಂದನಾರ್ಪಣೆಯನ್ನು ಸಂಘದ ಮುಖ್ಯಕಾರ್ಯನಿರ್ವಾಹಕರು ಶ್ರೀ ಇಕ್ಬಾಲ್ ಇವರು ವಂದಿಸಿದರು.

# ವಿವಿಧ ಹದಿನೈದು ಬೇಡಿಕೆಗಳ ಈಡೇರಿಕೆಗಾಗಿ

## ಆಗ್ರಹಿಸಿ ನ.26 ರಂದು ಬೃಹತ್ ಬೆಂಗಳೂರು ಚಲೋ!

ಕಾರ್ಮಿಕರಿಗೆ 8 ಗಂಟೆ ಕೆಲಸ ಮಾಡಿಸಬೇಕು. ಮತ್ತು ಹೆಚ್ಚುವರಿ ಕೆಲಸಕ್ಕೆ ದುಪ್ಪಟ್ಟು ಹಣ ಕೊಡಬೇಕು. ಖಾಲಿ ಹುದ್ದೆಗಳನ್ನು ಭರ್ತಿ ಮಾಡಬೇಕು ಎಂಬ ಅನೇಕ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಚಳುವಳಿ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಬಿ.ಎನ್.ಯರದಿಹಾಳ, ಚಿಟ್ಟಿಬಾಬು, ರಮೇಶ್ ಪಾಟೀಲ್ ಬೇರ್ಗಿ, ಬಸಲಿಂಗಪ್ಪ, ಅಪ್ಪಣ್ಣ ಜಾಲಿಹಾಳ, ಎಚ್.ವಿರುಪಾಕ್ಷಗೌಡ, ಚಂದ್ರಶೇಖರ್ ಕ್ಯಾತ್ನಟ್ಟಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಾಳಿಕಾದೇವಿ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವ



**ಕವಿತಾಳ,ನ.22–** ಪಟ್ಟಣದ ಕಾಳಿಕಾ ದೇವಿ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವ ಸಂಭ್ರಮದಿಂದ ಆಚರಿಸಲಾಯಿತು. ಮಹಿಳೆಯರು, ಮಕ್ಕಳು ಸೇರಿದಮಥೆ ಭಕ್ತಾದಿಗಳು ದೀಪ ಬೆಳಗಿಸಿ ಸಂಭ್ರಮಿಸಿದರು.

ಕಾಳಿಕಾದೇವಿ ಉತ್ಸವ ಮೂರ್ತಿಗೆ ಅಭಿಷೇಕ, ಕುಂಕುಮಾರ್ಚನೆ, ಮಹಾಮಂಗಳಾರತಿ ಸೇರಿದಮತೆ ವಿವಿಧ ಧಾರ್ಮಿಕ ಪೂಜಾ ವಿಧಿವಿಧಾನಗಳನ್ನು ಕೈಗೊಳ್ಳಲಾಗಿತ್ತು. ವಿಶ್ವಕರ್ಮ ಸಮಾಜದ ಮುಖಂಡರು ಮತ್ತು ಇನ್ನಿತರ ಭಕ್ತಾದಿಗಳು ಭಾಗವಹಿಸಿದ್ದರು ನಂತರ ಭಕ್ತಾದಿಗಳಿಗೆ ಮಹಾ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

# ಸನ್ ರೈಸ್ ಕಾಲೇಜಿನಲ್ಲಿ ನರ್ಸಿಂಗ್ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ




**ಯುವಮಾರ್ಗ ಸುದ್ದಿ**

**ಸಿಂಧನೂರು,ನ.22–** ತಾಲೂಕಿನ ಸನ್‌ರೈಸ್ ಡಿ ಫಾರ್ಮಸಿ , ನರ್ಸಿಂಗ್ ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ತೃತೀಯ ವರ್ಷದ ನರ್ಸಿಂಗ್ ವಿದ್ಯಾರ್ಥಿಗಳಿಗೆ ಭವ್ಯವಾದ ಬೀಳ್ಕೊಡುಗೆ ಕಾರ್ಯಕ್ರಮವನ್ನು ನಡೆಸಲಾಯಿತು. ಈ ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರಾದ ಶ್ರೀ ಇರ್ಫಾನ್ ಕೆ. ಅತ್ತಾರ್ ಅವರು ವಹಿಸಿದರು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ್ದ ಡಾ. ನಾಗರಾಜ್ ಕಾಟ್ವ ರವರು ಮತ್ತು ವೇದಿಕೆ ಮೇಲೆ ಇರುವ ಎಲ್ಲರೂ ಸೇರಿ ದೀಪ ಬೆಳಗುವ ಮೂಲಕ ಕಾರ್ಯಕ್ರಮವನ್ನು ಆರಂಭಿಸಲಾಯಿತು. ಡಾ. ನಾಗರಾಜ್ ಕಾಟ್ವ ರವರು ಮಾತನಾಡಿ, "ನರ್ಸಿಂಗ್ ವಿದ್ಯಾಭ್ಯಾಸ ಪೂರ್ಣಗೊಳಿಸಿ ಹೊರಟುತ್ತಿರುವ ನಿಮ್ಮೆಲ್ಲರೂ ಜೀವನದಲ್ಲಿ ಉತ್ತಮ ಭವಿಷ್ಯ ಕಟ್ಟಿಕೊಳ್ಳಬೇಕು. ಸನ್‌ರೈಸ್ ಕಾಲೇಜಿನಿಂದ ಹೊರಬರುತ್ತಿರುವ ವಿದ್ಯಾರ್ಥಿಗಳು ತಮ್ಮ ಸೇವೆಯಿಂದ ಎಲ್ಲರಿಂದಲೂ 'ಅತ್ಯುತ್ತಮ ಕಾಲೇಜಿನ ವಿದ್ಯಾರ್ಥಿಗಳು' ಎಂಬ ಹೆಗ್ಗಳಿಕೆಗೆ ಪಾತ್ರರಾಗಬೇಕು. ಸಮಾಜಕ್ಕೆ ಉತ್ತಮ ಪ್ರಜೆಯಾಗಿರಿ, ಆಸ್ಪತ್ರೆಗಳಲ್ಲಿ ಉತ್ತಮ ನರ್ಸ್ ಆಗಿರಿ, ಮತ್ತು ತಂದೆ–ತಾಯಿಯರಿಗೆ ಹೆಮ್ಮೆಪಡುವ ಮಕ್ಕಳಾಗಿರಿ," ಎಂದು ಸಂದೇಶ ನೀಡಿದರು.

ಅಧ್ಯಕ್ಷೀಯ ಭಾಷಣದಲ್ಲಿ ಶ್ರೀ ಇರ್ಫಾನ್ ಕೆ. ಅತ್ತಾರ್ ಮಾತನಾಡಿ, "'ನರ್ಸ್' ಅನ್ನುವ ಪದಕ್ಕೆ ಇರುವ ಮಹತ್ವ ಅಪಾರ. ಒಬ್ಬ ನರ್ಸ್ ಜೀವನದಲ್ಲಿ ಅನುಸರಿಸಬೇಕಾದ ಶಿಸ್ತು, ಸೇವಾಭಾವ ಮತ್ತು ಮನುಷ್ಯತ್ವವೇ ಅವರ ನಿಜವಾದ ಶಕ್ತಿ. ವಿದ್ಯಾರ್ಥಿಗಳು ಈ ಮೌಲ್ಯಗಳನ್ನು ಜೀವನಪೂರ್ತಿ ಪಾಲಿಸಬೇಕು," ಎಂದು ಸಲಹೆ ನೀಡಿದರು.


ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶ್ರೀ ಲಾಜರ್ ಸಿರಿಲ್ ಜಿ ಅವರು ಮಾತನಾಡಿ, "ನಿಮ್ಮಲ್ಲಿರುವ ಕೌಶಲ್ಯ, ಜ್ಞಾನ ಮತ್ತು ಮನುಷ್ಯತ್ವವೇ ನಿಮ್ಮನ್ನು ಜೀವನದಲ್ಲಿ ಮುನ್ನಡೆಸುತ್ತದೆ. ನೀವು ಜೀವಗಳ ಜೊತೆ ಕೆಲಸ ಮಾಡುವ ವೃತ್ತಿಯವರಾಗಿದ್ದೀರಿ; ಆದ್ದರಿಂದ ನಿಮ್ಮ ಕೌಶಲ್ಯದಿಂದ ರೋಗಿಗಳ ಸೇವೆ ಮಾಡಿ ಸಮಾಜಕ್ಕೆ ಕೀರ್ತಿ ತರುವಂತೆ ಪ್ರಯತ್ನಿಸಬೇಕು," ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಜ್ಞಾನೇಶ್ವರಿ, ಶ್ರೀ ಪ್ರಶಾಂತ್, ಶ್ರೀ ವೀರೇಶ್ ಅವರು ಅತಿಥಿಗಳಾಗಿ ಭಾಗಿಯಾಗಿ ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಸಂದೇಶಗಳನ್ನು ನೀಡಿದರು. ಸಂಸ್ಥೆಯ ಕಾರ್ಯದರ್ಶಿಗಳಾದ ಶ್ರೀ ಇರ್ಷಾದ್ ಕೆ. ಅತ್ತಾರ್ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಶುಭಾಶಯಗಳನ್ನು ತಿಳಿಸಿದರು. ನಂತರ ತೃತೀಯ ವರ್ಷದ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಕಾರ್ಯಕ್ರಮದ ನಂತರ ಮಧ್ಯಾಹ್ನ ಪ್ರೀತಿಯ ಭೋಜನ ಏರ್ಪಡಿಸಲಾಗಿದ್ದು, ಬಳಿಕ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ವಿದ್ಯಾರ್ಥಿಗಳು ನೀಡಿದ ಮನಮೋಹಕ ಸಾಂಸ್ಕೃತಿಕ ಪ್ರದರ್ಶನದಿಂದ ಕಾರ್ಯಕ್ರಮ ಮನರಂಜನೆಗೊಳಿಸಿ ಯಶಸ್ವಿಯಾಗಿ ಮುಗಿಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ ಅತ್ತಾರ್ ರವರು ಮತ್ತು ಕಾರ್ಯದರ್ಶಿಗಳಾದ ಇರ್ಷಾದ್ ಕೆ, ನರ್ಸಿಂಗ್ ವಿಭಾಗದ ಪ್ರಾಂಶುಪಾಲರಾದ ಸಿರಿಲ್ ಜಿ, ಫಾರ್ಮಸಿ ಪ್ರಾಂಶುಪಾಲರಾದ ವಸಿಂ ಹುಸೇನ್, ಪ್ಯಾರಾ ಮೆಡಿಕಲ್ ಪ್ರಾಂಶುಪಾಲರಾದ ಚಕ್ರವರ್ತಿ, ಎಲ್ಲ ವಿಭಾಗದ ಉಪನ್ಯಾಸಕರು ಹಾಗೂ ವಿದ್ಯಾರ್ಥಿ ಉಪಸ್ಥಿತರಿದ್ದರು

# ಮೆಗಾಸಿಟಿ ಯೋಜನೆ: ಎರಡು ಪ್ರಕರಣಗಳಲ್ಲಿ ಸಿಪಿವೈ ಖುಲಾಸೆ



**ಬೆಂಗಳೂರು,ನ. 22–** ಮೆಗಾ ಸಿಟಿ ಪ್ರಾಜೆಕ್ಟ್ ಪ್ರಕರಣದಲ್ಲಿ ಚನ್ನಪಟ್ಟಣದ ಕಾಂಗ್ರೆಸ್ ಶಾಸಕ ಸಿ.ಪಿ.ಯೋಗೇಶ್ವರ್‌ಗೆ ಬಿಗ್ ರಿಲೀಫ್ ಸಿಕ್ಕಿದ್ದು ಎರಡು ಪ್ರಕರಣಗಳಲ್ಲಿ ಖುಲಾಸೆಯಾಗಿದ್ದಾರೆ.

ಶಾಸಕ ಯೋಗೇಶ್ವರ್ ಸೇರಿ 6 ಆರೋಪಿಗಳನ್ನು ಪ್ರಕರಣದಿಂದ ನ್ಯಾಯಾಲಯ ಖುಲಾಸೆ ಮಾಡಿದ್ದು ಯೋಗೇಶ್ವರ್ ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಇಂದು ಪ್ರಕರಣದ ವಿಚಾರಣೆ ನಡೆಸಿತು. ನ್ಯಾ. ಕೆ.ಎನ್.ಶಿವಕುಮಾರ್ ಅವರು ತೀರ್ಪು ಪ್ರಕಟಿಸಿದ್ದಾರೆ.

ಮೆಗಾ ಸಿಟಿ ಪ್ರಾಜೆಕ್ಟ್ ವಂಚನೆ ಆರೋಪದಲ್ಲಿ 9 ಕೇಸ್‌ಗಳಿದ್ದವು. ಈ ಹಿಂದೆ 3 ಕೇಸ್‌ಗಳಲ್ಲಿ ಯೋಗೇಶ್ವರ್ ಖುಲಾಸೆ ಆಗಿದ್ದರು. ಇದೀಗ ಮತ್ತೆ ಎರಡು ಪ್ರಕರಣಗಳಲ್ಲಿ ಖುಲಾಸೆಯಾಗಿದ್ದಾರೆ.

ಇನ್ನೂ 4 ಪ್ರಕರಣಗಳು ಕೋರ್ಟ್‌ನಲ್ಲಿ ಬಾಕಿಯಿವೆ ಮೆಗಾ ಸಿಟಿ ಯೋಜನೆ ಹೆಸರಲ್ಲಿ ಹಣ ಪಡೆದು ನಿವೇಶನ ಹಂಚಿಕೆ ಮಾಡಿಲ್ಲ' ಎಂಬ ಆರೋಪ ಎದುರಿಸುತ್ತಿದ್ದ ಚನ್ನಪಟ್ಟಣ ಶಾಸಕ ಸಿ.ಪಿ.ಯೋಗೇಶ್ವರ ಅವರನ್ನು ಜನಪ್ರತಿನಿಧಿಗಳ ಕೋರ್ಟ್ ಖುಲಾಸೆಗೊಳಿಸಿದೆ.

ಈ ಕುರಿತಂತೆ ಕಾಯ್ದಿರಿಸಿದ್ದ ಆದೇಶವನ್ನು 'ಶಾಸಕರು ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಶೇಷ ನ್ಯಾಯಾಲಯ'ದ ನ್ಯಾಯಾಧೀಶ ರಾಮಚಂದ್ರ ಡಿ.ಹುದ್ದಾರ ಪ್ರಕಟಿಸಿದ್ದಾರೆ.'ಈ ಪ್ರಕರಣದ ತನಿಖೆಯನ್ನು ತನಿಖಾಧಿಕಾರಿ ಅತ್ಯಂತ ಅನ್ಯಮನಸ್ಕರಾಗಿ ಮತ್ತು ಅಜಾಗರೂಕತೆಯಿಂದ ನಡೆಸಿದ್ದಾರೆ. ಹೀಗಾಗಿ ಸಾಕ್ಷ್ಯಾಧಾರಗಳ ಕೊರತೆಯಿಂದ ಆರೋಪಿಗಳನ್ನು ಖುಲಾಸೆ ಮಾಡಲಾಗುತ್ತಿದೆ. ಆದ್ದರಿಂದ, ಈ ಪ್ರಕರಣದ ತನಿಖೆ ನಡೆಸಿದ ತನಿಖಾಧಿಕಾರಿ ತಪ್ಪು ಎಸಗಿದ್ದು, ಅವರ ವಿರುದ್ಧ ಡಿಜಿ ಮತ್ತು ಐಜಿ ಸೂಕ್ತ ಕ್ರಮ ಕೈಗೊಳ್ಳಬೇಕು' ಎಂದು ನ್ಯಾಯಾಧೀಶರು ಆದೇಶಿಸಿದ್ದಾರೆ.

ಆರೋಪಿಗಳಾದ ಸಿ.ಪಿ.ಯೋಗೇಶ್ವರ, ಎಸ್.ಪಿ.ಗಂಗಾಧರೇಶ್ವರ, ಪಿ.ಮಹದೇವಪ್ಪ ಮತ್ತು ಎಚ್.ಆರ್.ರಮೇಶ್ ಪ್ರಕರಣದಲ್ಲಿ ಖುಲಾಸೆಗೊಂಡಿರುವ ಆರೋಪಿಗಳಾಗಿದ್ದಾರೆ

'1994ರಲ್ಲಿ ಮೆಗಾಸಿಟಿ ಯೋಜನೆ ಅಡಿ ಬೆಂಗಳೂರು–ಮೈಸೂರು ರಸ್ತೆಯಲ್ಲಿ ನಿವೇಶನ ನೀಡುವುದಾಗಿ ಸಿ.ಪಿ. ಯೋಗೇಶ್ವರ್, ಜನರಿಂದ ಹಣ ಸಂಗ್ರಹಿಸಿದ್ದರು. ನಂತರ ಹಣ ಮತ್ತು ನಿವೇಶನ ಎರಡೂ ನೀಡಲಿಲ್ಲ' ಎಂದು ನಿವೇಶನಕ್ಕೆ ಹಣ ನೀಡಿದವರು ದೂರು ದಾಖಲಿಸಿದ್ದರು.

# ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಶಿವಲೀಲಾ ತಂಡ



ಮಾನ್ವಿ,ನ.22– ಕನ್ನಡ ಚಿತ್ರರಂಗದಲ್ಲಿ ಹೊಸ ಅಲೆಯೆಬ್ಬಿಸಲು, ಹೊಸ ಪ್ರತಿಭೆಗಳ ಸಂಗಮದೊಂದಿಗೆ ಸಿದ್ಧವಾಗಿರುವ 'ಶಿವಲೀಲಾ' ಚಲನಚಿತ್ರದ ಪ್ರಚಾರ ಕಾರ್ಯಕ್ರಮವು ಪಟ್ಟಣದ ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಅದ್ದೂರಿಯಾಗಿ ಜರುಗಿತು.

ಚಿತ್ರತಂಡವು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಚಿತ್ರದ ವಿಶೇಷತೆಗಳನ್ನು ಹಂಚಿಕೊಂಡಿತು. ಈ ವೇಳೆ ಮಾತನಾಡಿದ ಚಿತ್ರದ ನಾಯಕ ನಟ, ಹೊಸ ಪ್ರತಿಭೆ ದಿವಾಕರ್, "ಚಿತ್ರರಂಗವು ಈಗ ಹೊಸ ಹಾದಿಯಲ್ಲಿ ಸಾಗುತ್ತಿದ್ದು, ಶಿವಲೀಲಾ ಚಿತ್ರವು ವಿಭಿನ್ನ ಆಲೋಚನೆಗಳೊಂದಿಗೆ ಮೂಡಿಬಂದಿದೆ. ಇದೊಂದು ಹೊಸ ಪ್ರಯತ್ನವಾಗಿದ್ದು, ಕಥೆಯು ತುಂಬಾ ಸುಂದರವಾಗಿ ರೂಪುಗೊಂಡಿದೆ. ಎಲ್ಲರೂ ನಮ್ಮ ತಂಡಕ್ಕೆ ಶುಭ ಹಾರೈಸಬೇಕು," ಎಂದು ಮನವಿ ಮಾಡಿದರು.

**ಮಂಗಳಮುಖಿಯರ ಬದುಕಿನ ಕನ್ನಡಿ:** ಚಿತ್ರದ ಪ್ರಮುಖ ಪಾತ್ರಧಾರಿ ಹಾಗೂ ಮಾನ್ವಿ ಮೂಲದ ನಟಿ ದೀಪಜ್ಯೋತಿ ಅವರು ಮಾತನಾಡಿ, "ಈ ಚಿತ್ರವು ಮುಖ್ಯವಾಗಿ ಮಂಗಳಮುಖಿಯರ ಜೀವನವನ್ನು ಆಧಾರವಾಗಿರಿಸಿಕೊಂಡಿದೆ. ಸಮಾಜದಲ್ಲಿ ಮಂಗಳಮುಖಿಯರು ಎದುರಿಸುತ್ತಿರುವ ಸಂಕಷ್ಟಗಳು, ಅವರಿಗೆ ಸಿಗದ ಅವಕಾಶಗಳು ಮತ್ತು ಸಮಾಜ ಅವರನ್ನು ನೋಡುವ ದೃಷ್ಟಿಕೋನದ ಬಗ್ಗೆ ನೈಜವಾಗಿ ಚಿತ್ರಿಸಲಾಗಿದೆ," ಎಂದರು.

ಮುಂದುವರೆದು ಮಾತನಾಡಿದ ಅವರು, "ನಾವು ಕೂಡ ಸಮಾಜದಲ್ಲಿ ಗುರುತಿಸಿಕೊಳ್ಳಲು ಹೋರಾಡುತ್ತಿದ್ದೇವೆ. ಜನರು ನಮ್ಮನ್ನು ಮನುಷ್ಯರಂತೆ ಕಾಣಬೇಕು ಮತ್ತು ನಮ್ಮ ಕೈ ಹಿಡಿಯಬೇಕು," ಎಂದು ಭಾವುಕರಾಗಿ ನುಡಿದರು.

**ಉತ್ತರ ಕರ್ನಾಟಕದ ಪ್ರತಿಭೆಗಳಿಗೆ ಮಣೆ:** ಸರ್ವೋದಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಅನಿಲ್ ಕುಮಾರ್ ಎಚ್. ಅವರು ಮಾತನಾಡಿ, "ಈ ಚಿತ್ರದಲ್ಲಿ ಉತ್ತರ ಕರ್ನಾಟಕ ಭಾಗದ ಕಲಾವಿದರೇ ಹೆಚ್ಚಾಗಿ ನಟಿಸಿರುವುದು ಹೆಮ್ಮೆಯ ವಿಷಯ. ಯಾವುದೇ ಅಡ್ಡಿ ಆತಂಕಗಳಿಲ್ಲದೆ ಚಿತ್ರವು ಯಶಸ್ವಿಯಾಗಿ ಬಿಡುಗಡೆಯಾಗಲಿ," ಎಂದು ಶುಭ ಹಾರೈಸಿದರು. ಇದೇ ಸಂದರ್ಭದಲ್ಲಿ ಸಂಸ್ಥೆಯ ಮಾರ್ಗದರ್ಶಿಗಳು ಅಂಜನೇಯ ಹೆಚ್, ಉಪನ್ಯಾಸಕರು, ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಚಿತ್ರತಂಡಕ್ಕೆ ಶುಭ ಕೋರಿದರು.

**ಚಿತ್ರದ ವಿಶೇಷತೆಗಳು:** ಜಯರಾಮ್ ಕ್ರಿಯೇಷನ್ ಲಾಂಛನದಲ್ಲಿ ಮೂಡಿಬರುತ್ತಿರುವ ಈ ಚಿತ್ರಕ್ಕೆ ಅಶೋಕ್ ಜೈರಾಮ್ ಅವರೇ ಕಥೆ, ಚಿತ್ರಕಥೆ, ಸಾಹಿತ್ಯ, ಸಾಹಸ ನಿರ್ದೇಶನ ಹಾಗೂ ನಿರ್ಮಾಣದ ಜವಾಬ್ದಾರಿಯನ್ನು ಹೊತ್ತಿದ್ದಾರೆ. ಪದ್ಮಶ್ರೀ ಪುರಸ್ಕೃತರಾದ ಡಾ. ಜೋಗತಿ ಮಂಜಮ್ಮ ಅವರು ಚಿತ್ರದಲ್ಲಿ ವಿಶೇಷ ಪಾತ್ರದಲ್ಲಿ ಅಭಿನಯಿಸಿದ್ದಾರೆ. ಸಂಸ್ಕೃತಿ ಲಕ್ಷ್ಮಣ್ ಅವರು 'ಲೀಲಾ' ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

ಚಿತ್ರವು ಬರುವ 2026ರ ಜನವರಿ ತಿಂಗಳಲ್ಲಿ ರಾಜ್ಯಾದ್ಯಂತ ಬಿಡುಗಡೆಯಾಗಲು ಸಜ್ಜಾಗಿದೆ ಎಂದು ನಿರ್ದೇಶಕ ಅಶೋಕ್ ಜೈರಾಮ್ ತಿಳಿಸಿದರು.






## ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರಾಗಿ ದೇವೇಗೌಡರು, ರಾಜ್ಯಾಧ್ಯಕ್ಷರಾಗಿ ಕುಮಾರಸ್ವಾಮಿ ಪುನರಾಯ್ಕೆ



**ಬೆಂಗಳೂರು, ನ.22**–ಜೆಡಿಎಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾಗಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಹಾಗೂ ರಾಜ್ಯಾಧ್ಯಕ್ಷರಾಗಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಅವಿರೋಧವಾಗಿ ಪುನರಾಯ್ಕೆ ಆಗಿದ್ದಾರೆ.

ಪಕ್ಷದ ರಾಜ್ಯ ಕಚೇರಿ ಜೆಪಿ ಭವನದಲ್ಲಿ ನಡೆದ ರಾಷ್ಟ್ರೀಯಮಂಡಳಿ ಸಭೆಯಲ್ಲಿ ಈ ಇಬ್ಬರು ನಾಯಕರ ಪುನರಾಯ್ಕೆ ಬಗ್ಗೆ ರಾಷ್ಟ್ರೀಯ ಪ್ರತಿನಿಧಿಗಳು ಒಮತದ ನಿರ್ಧಾರ ಕೈಗೊಂಡಿದ್ದಾರೆ. ರಾಷ್ಟ್ರ ಮಟ್ಟದಲ್ಲಿ ಪಕ್ಷ ಸಂಘಟನೆಗೆ ವಿಪುಲವಾದ ಅವಕಾಶಗಳಿವೆ.

ಅದೇ ರೀತಿಯಲ್ಲಿ ಕರ್ನಾಟಕದಲ್ಲಿ ಪಕ್ಷ ಸಂಘಟನೆಯನ್ನು ಬಲಿಷ್ಠವಾಗಿ ಮಾಡಬೇಕಿದೆ. ಈ ಹಿನ್ನೆಲೆಯಲ್ಲಿ ದೇವೇಗೌಡರು ಹಾಗೂ ಕುಮಾರಸ್ವಾಮಿ ಅವರ ನೇತೃತ್ವದಲ್ಲಿಯೇ ಪಕ್ಷವನ್ನು ಸಂಘಟಿಸುವ ನಿರ್ಧಾರಕ್ಕೆ ರಾಷ್ಟ್ರಿಯ ಮಂಡಳಿ ನಿರ್ಣಯಿಸಿದೆ.

ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್ ಬಾಬು ಅವರು, ರಾಜ್ಯದ ಏಕೈಕ ಪ್ರಾದೇಶಿಕ ಪಕ್ಷ ಜೆಡಿಎಸ್ ಆಗಿದ್ದು, ಪಕ್ಷಕ್ಕೆ ಈಗ 25 ವರ್ಷ ತುಂಬಿದೆ. ದೇವೇಗೌಡರು ಮತ್ತು ಕುಮಾರಸ್ವಾಮಿ ಅವರ ಅವಿರತ ಶ್ರಮದಿಂದ ಪಕ್ಷ ಇವತ್ತಿಗೂ ಗಟ್ಟಿಯಾಗಿಯೇ ಉಳಿದಿದೆ. ಅಸಂಖ್ಯಾತ ಕಾರ್ಯಕರ್ತರ ಪಡೆಯನ್ನು ಹೊಂದಿದೆ. ದೇವೇಗೌಡರು ಪಕ್ಷವನ್ನು ಕಟ್ಟಿ ಬೆಳೆಸಿ, ತಮ ಬದುಕನ್ನೆ ಪಕ್ಷಕ್ಕೆ ಮೀಸಲು ಇರಿಸಿದ್ದಾರೆ. ಬೆಳ್ಳಿಹಬ್ಬದ ಸಂದರ್ಭದಲ್ಲಿ ಈ ಇಬ್ಬರು ಬಲಿಷ್ಠ ನಾಯಕರೇ ಪಕ್ಷವನ್ನು ಮುನ್ನಡೆಸಬೇಕು ಎಂದು ರಾಷ್ಟ್ರೀಯ ಮಂಡಳಿ ತೀರ್ಮಾನಿಸಿತು ಎಂದು ಅವರು ಹೇಳಿದರು.

ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ರಾಜ್ಯದ ಉದ್ದಗಲಕ್ಕೂ ಕೈಗೊಂಡಿರುವ ಸಂಘಟನಾ ಪ್ರವಾಸ ಹಾಗೂ ಸದಸ್ಯತ್ವ ನೋಂದಣಿ ಅಭಿಯಾನ ಯಶಸ್ವಿಯಾಗಿ ಮುಂದುವರಿದ್ದು, ಇದಕ್ಕೆ ಸಭೆಯಲ್ಲಿ ಮೆಚ್ಚಿಗೆ ದೊರೆತಿದೆ. ಎಲ್ಲಾ ನಾಯಕರು ಅವರ ಸಂಘಟನಾ ಶಕ್ತಿಯ ಬಗ್ಗೆ ಶ್ಲಾಘನೆ ಮಾಡಿದ್ದಾರೆ ಎಂದರು. ಜೆಡಿಎಸ್ ರಾಷ್ಟ್ರೀಯ ಮಂಡಳಿ ಸಭೆಯಲ್ಲಿ ರೈತರ ಪರವಾಗಿ ಹಾಗೂ ಪಕ್ಷ ಸಂಘಟನೆ ಮಾಡುವ ಬಗ್ಗೆ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಯುವ ಜನತಾದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಮಾಜಿ ಸಚಿವರಾದ ಬಂಡೆಪ್ಪ ಕಾಶೆಂಪೂರ್, ಕೋರ್ ಕಮಿಟಿ ಅಧ್ಯಕ್ಷ ಎಂ.ಕೃಷ್ಣಾರೆಡ್ಡಿ, ವಿಧಾನ ಪರಿಷತ್ ಸದಸ್ಯ ಟಿ.ಎ. ಶರವಣ, ಮಾಜಿ ಶಾಸಕರಾದ ದೊಡ್ಡನಗೌಡ ಪಾಟೀಲ್, ಹೆಚ್.ಎಂ. ರಮೇಶ್ ಗೌಡ, ಜೆಡಿಎಸ್ ಐಟಿ ವಿಭಾಗದ ಅಧ್ಯಕ್ಷ ಚಂದನ್ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

## 7 ಕೋಟಿ ದರೋಡೆ ಪ್ರಕರಣದ ಖದೀಮರನ್ನು ಬೇಟೆಯಾದ ಪೊಲೀಸರು, 5.76 ಕೋಟಿ ರೂ. ವಶಕ್ಕೆ

**ಬೆಂಗಳೂರು,ನ.22**–ಸಿನೀಮಿಯ ಶೈಲಿಯಲ್ಲಿ 7.11 ಕೋಟಿ ಹಣವನ್ನು ದರೋಡೆ ಮಾಡಿ ಪರಾರಿಯಾಗಿದ್ದ ಖದೀಮರನ್ನು ಬೆನ್ನಟ್ಟಿ ಬೇಟೆಯಾಡಿರುವ ಪೊಲೀಸರು ಕೇವಲ 60 ಗಂಟೆಗಳಲ್ಲೆ ಪ್ರಮುಖ ಆರೋಪಿಗಳ ಪೈಕಿ ಮೂವರನ್ನು ಬಂಧಿಸಿ 5.76 ಕೋಟಿ ರೂ.ಗಳನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತ ಆರೋಪಿಗಳನ್ನು ಪ್ರಕರಣದ ಕಿಂಗ್‌ಪಿನ್ ಎನ್ನಲಾದ ಗೋವಿಂದಪುರ ಠಾಣೆಯ ಕಾನ್ಸ್‌ಟೇಬಲ್ ಅಣ್ಣಪ್ಪನಾಯಕ್, ಸಿಎಂಎಸ್ ಸಂಸ್ಥೆಯ ಹಾಲಿ ನೌಕರ ಗೋಪಿ ಹಾಗೂ ಮಾಜಿ ನೌಕರ ಕ್ಸೆವಿಯರ್ ಎಂದು ಗುರುತಿಸಲಾಗಿದೆ.

ಇಡೀ ಪ್ರಕರಣದ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿಂದು ಇಂಚಿಂಚೂ ಮಾಹಿತಿ ನೀಡಿದ ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಅವರು ಪ್ರಕರಣ ನಡೆದ ಕೇವಲ 54 ಗಂಟೆಗಳಲ್ಲಿ ಮೂವರು ಆರೋಪಿಗಳನ್ನು ಬಂಧಿಸಲಾಗಿದೆ. 60 ಗಂಟೆಗೊಳಗಾಗಿ 5.76 ಕೋಟಿ ರೂ.ಗಳು ಹಾಗೂ ಕೃತ್ಯಕ್ಕೆ ಬಳಸಿದ್ದ ಒಂದು ವಾಹನ ವಶಪಡಿಸಿಕೊಳ್ಳಲಾಗಿದೆ ಎಂದರು.

ನ.19 ರ ಮಧ್ಯಾಹ್ನ ನಡೆದ ಈ ದರೋಡೆ ಪ್ರಕರಣದಲ್ಲಿ 6 ರಿಂದ 8 ಮಂದಿ ಭಾಗಿಯಾಗಿದ್ದು, ದಕ್ಷಿಣ ವಿಭಾಗದ 11 ಇನ್ಸ್‌ಪೆಕ್ಟರ್‌ಗಳು, ಇಬ್ಬರು ಎಸಿಪಿಗಳು,ಸಿಸಿಬಿ ವಿಭಾಗದ 6 ಮಂದಿ ಇನ್ಸ್‌ಪೆಕ್ಟರ್‌ಗಳು ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪ್ರಕರಣ ಬೇಧಿಸುವಲ್ಲಿ ಯಶಸ್ವಿಯಾಗಿದ್ದು, ಉಳಿದ ಆರೋಪಿಗಳಿಗಾಗಿ ಹುಡುಕಾಟ ಮುಂದುವರೆಸಿದ್ದಾರೆಂದು ತಿಳಿಸಿದರು.ಇಡಿ ನಗರವನ್ನು ಬೆಚ್ಚಿ ಬೀಳಿಸಿದ್ದ ಈ ದರೋಡೆ ಪ್ರಕರಣ ಪೂರ್ವನಿಯೋಜಿತವಾಗಿದ್ದು ಆರೋಪಿಗಳು ಯಾವುದೇ ಸುಳಿವು ನೀಡದಂತೆ ಎಚ್ಚರಿಕೆ ವಹಿಸಿದ್ದರು.ಅಪರಾಧಿಗಳು ಸಿಸಿ ಕ್ಯಾಮರಾಗಳು ಇಲ್ಲದ ಪ್ರದೇಶಗಳಲ್ಲಿ ವಾಹನ ನಿಲುಗಡೆ ಮಾಡಿದ್ದರು. ಕಾರ್ಯಾಚರಣೆ ಸಂದರ್ಭದಲ್ಲಿ ಮೊಬೈಲ್ ಫೋನ್‌ಗಳನ್ನು ಬಳಕೆ ಮಾಡಿರಲಿಲ್ಲ, ತನಿಖೆ ದಾರಿ ತಪ್ಪಿಸಲು ಹಲವು ಭಾಷೆಗಳಲ್ಲಿ ಸಂವಹನ ನಡೆಸುತ್ತಿದ್ದರು. ಹಾಗೂ ಕಾರ್ಯಾಚರಣೆಗೆ ಹಲವಾರು ವಾಹನಗಳನ್ನು ಬಳಸಿ ಅವುಗಳ ನಂಬರ್‌ಪ್ಲೇಟ್‌ಗಳನ್ನು ಪದೇ ಪದೇ ಬದಲಾಯಿಸುತ್ತಿದ್ದರು.

ಪೊಲೀಸರಿಗೆ ತಲೆನೋವಾಗಿದ್ದ ಈ ಪ್ರಕರಣವನ್ನು ಬೇಧಿಸಲೇಬೇಕು ಎಂದು ಛಲತೊಟ್ಟ ನಮ ಪೊಲೀಸರು ಕೇರಳ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ,ರಾಜ್ಯದ ಹಲವು ಪ್ರದೇಶಗಳಲ್ಲಿ ಆರೋಪಿಗಳಿಗಾಗಿ ಶೋಧ ನಡೆಸಿದ್ದರು.ಕೆಲವು ಪೊಲೀಸ್ ತಂಡಗಳು ಗೋವಾ ರಾಜ್ಯದ ವ್ಯಾಪ್ತಿಯವರೆಗೂ ತೆರಳಿ ತನಿಖೆ ನಡೆಸಿದ್ದರು. ಇದರ ಜೊತೆಗೆ 30ಕ್ಕೂ ಹೆಚ್ಚು ಮಂದಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗಿತ್ತು.ಆರೋಪಿಗಳು ಬಳಸಿದ್ದ ವಾಹನಗಳ ಚಲನವಲನ, ಸಿಸಿ ಟಿವಿ ದೃಶ್ಯಾವಳಿ ಹಾಗೂ ಸ್ಥಳೀಯ ಗುಪ್ತಚರ ಮಾಹಿತಿಯನ್ನು ಆಧರಿಸಿ ಮೂವರು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಆಯುಕ್ತರು ಮಾಹಿತಿ ನೀಡಿದರು.



**ಪ್ರಕರಣದ ಹಿನ್ನೆಲೆ:**ನ.19 ರ ಮಧ್ಯಾಹ್ನ 1.30 ರ ಸುಮಾರಿಗೆ 7.11 ಕೋಟಿ ಹಣ ಹೊಯ್ಯುತ್ತಿದ್ದ ಸಿಎಂಎಸ್ ಸಂಸ್ಥೆಯ ವಾಹನವನ್ನು ಡಿಜೆ ಹಳ್ಳಿ ಸಮೀಪ ಆರ್‌ಬಿಐ ಅಧಿಕಾರಿಗಳಂತೆ ಪೋಸ್ ನೀಡಿ ತಡೆದಿದ್ದ ದರೋಡೆಕೋರರು ನಂತರ ವಾಹನವನ್ನು ಡೈರಿ ಸರ್ಕಲ್ ವೃತ್ತದ ಮೇಲ್ಸೆತುವೆ ಸಮೀಪ ಕರೆತಂದು ಶಸ್ತ್ರ ತೋರಿಸಿ 7.11 ಕೋಟಿ ಹಣವಿದ್ದ ಟ್ರಂಕ್‌ಗಳನ್ನು ದೋಚಿ ಪರಾರಿಯಾಗಿದ್ದರು. ಈ ಕುರಿತು ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

## ಬಿವೈವಿ–ಸಂತೋಷ್ ಮಹತ್ವದ ಭೇಟಿ



**ಬೆಂಗಳೂರು, ನ. 22**– ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಕದನ ತಾರಕಕ್ಕೇರಿರುವಾಗಲೇ ಬಿಜೆಪಿಯಲ್ಲೂ ರಾಜ್ಯಾಧ್ಯಕ್ಷರ ನೇಮಕ ಮುನ್ನಲೆಗೆ ಬಂದಿದ್ದು, ದೆಹಲಿ ಯಾತ್ರೆ ನಡೆಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಶನಿವಾರದಂದು ಬಿಜೆಪಿಯ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂ ತೋಷ್ ಅವರನ್ನು ಭೇಟಿ ಮಾಡಿ ಚರ್ಚಿಸಿದರು.

ಬಿಹಾರ ವಿಧಾನಸಭಾ ಚುನಾವಣೆ ಫಲಿತಾಂಶದ ನಂತರ ಬಿಜೆಪಿ ಹೈಕಮಾಂಡ್ ನೂತನ ರಾಷ್ಟ್ರೀಯ ಅಧ್ಯಕ್ಷರ ನೇಮಕಕ್ಕೆ ಮುಂದಾಗಿದ್ದು, ಅದಕ್ಕೂ ಮೊದಲು ಕರ್ನಾಟಕ ಸೇರಿದಂತೆ ಕೆಲ ರಾಜ್ಯಗಳ ಬಿಜೆಪಿ ಅಧ್ಯಕ್ಷರ ನೇಮಕಕ್ಕೂ ತೀರ್ಮಾನ ಮಾಡಿದೆ.

ಈ ಎಲ್ಲ ಬೆಳವಣಿಗೆಗಳ ನಡುವೆಯೇ ಎರಡು ದಿನಗಳ ಹಿಂದೆ ದೆಹಲಿಗೆ ತೆರಳಿದ್ದ ಬಿ.ವೈ.ವಿಜಯೇಂದ್ರ ದೆಹಲಿಯಲ್ಲೇ ಮೊಕ್ಕಾಂ ಹೂಡಿ ವರಿಷ್ಠ ನಾಯಕರನ್ನು ಭೇಟಿ ಮಾಡಿ ಬಿಜೆಪಿ ರಾಜ್ಯಾಧ್ಯಕ್ಷರಾಗಿ ತಮ್ಮನ್ನು ಮುಂದುವರೆಸುವಂತೆ ಮನವಿ ಮಾಡುತ್ತಿದ್ದು, ಇಂದು ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದರು.

ದೆಹಲಿಯಲ್ಲಿರುವ ವಿಜಯೇಂದ್ರ ಅವರು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡುವ ಜತೆಗೆ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ದಾಸ್ ಅವರನ್ನು ಭೇಟಿ ಮಾಡಿ ಚರ್ಚಿಸಲಿದ್ದಾರೆ.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಎಲ್ ಸಂತೋಷ್ ಅವರನ್ನು ದೆಹಲಿಯಲ್ಲಿ ಭೇಟಿ ಮಾಡಿರುವ ಬಗ್ಗೆ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ವಿಜೇಯಂದ್ರ, ಪಕ್ಷದ ಹಿರಿಯ ಹಾಗೂ ಮಾರ್ಗದರ್ಶಕಾರಾಗಿ ಸಂತೋಷ್ ಜಿ ಅವರನ್ನು ಇಂದು ನವದೆಹಲಿಯಲ್ಲಿ ಭೇಟಿ ಮಾಡಿ ರಾಜ್ಯದಲ್ಲಿ ಪಕ್ಷ ಸಂಘಟನೆ, ಕಾಂಗ್ರೆಸ್ ಸರ್ಕಾರದ ವಿರುದ್ಧ ಮುಂದಿನ ಹೋರಾಟದ ರೂಪುರೇಷೆ ಸೇರಿದಂತೆ ಹಲವಾರು ವಿಷಯಗಳ ಬಗ್ಗೆ ಚರ್ಚಿಸಿ ಮಾರ್ಗದರ್ಶನ ಪಡೆಯಲಾಯಿತು ಎಂದಿದ್ದಾರೆ.

ಪಕ್ಷದ ಸೈದ್ಧಾಂತಿಕತೆ ಪೈಚಾರಿಕ ಸ್ಪಷ್ಟನೆ ಹೊಂದಿರುವ ಸಂತೋಷ್ ಅವರ ಮಾತುಗಳು ನನ್ನಂತಹ ಲಕ್ಷಾಂತರ ಕಾರ್ಯಕರ್ತರಿಗೆ ಸದಾ ಸ್ಫೂರ್ತಿ ಎಂದು ವಿಜಯೇಂದ್ರ ಟ್ವೀಟ್ ಮಾಡಿದ್ದಾರೆ.

# ಮಕ್ಕಳ ಪ್ರತಿಭೆ ಗುರುತಿಸಲು ಪ್ರತಿಭಾ ಕಾರಂಜಿ ಉತ್ತಮ ವೇದಿಕೆ: ಬಸವರಾಜ ಅಂಗಡಿ.



ಯುವಮಾರ್ಗ ಸುದ್ದಿ

**ರಾಯಚೂರು,ನ.22–**ತಾಲೂಕಿನ ಇಜೆ ಹೊಸಳ್ಳಿ ಕ್ಯಾಂಪ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಲಯ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಜರುಗಿತು.13 ಶಾಲೆಗಳ 300 ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅಧ್ಯಕ್ಷತೆ ಎಸ್.ಡಿ.ಎಮ್.ಸಿ ಅಧ್ಯಕ್ಷ ಪ್ರಕಾಶ ವಹಿಸಿದ್ದರು. ಗ್ರಾಂ. ಪಂ.ಅಧ್ಯಕ್ಷೆ ರೇಣುಕಮ್ಮ ಹುಸೇನಪ್ಪ ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ವಲಯ ಮಟ್ಟದ ಸಂಪನ್ಮೂಲ ಅಧಿಕಾರಿಗಳಾದ ಬಸವರಾಜ ಅಂಗಡಿ ಅವರು ಪ್ರಾಸ್ತವಿಕವಾಗಿ ಮಾತನಾಡಿ, ಮಕ್ಕಳು ತಮ್ಮ ಪಠ್ಯ ಪುಸ್ತಕಗಳನ್ನು ಓದುವುದರ ಜೊತೆಗೆ ಬೌದ್ಧಿಕ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಹಾಗೂ ಅಧ್ಯಾತ್ಮಿಕ ಚಿಂತನೆಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಲು ಇಂತಹ ವೇದಿಕೆಗಳು ಮಕ್ಕಳಿಗೆ ಬಹಳ ಅವಶ್ಯಕತೆ ಇದೆ. ಮಕ್ಕಳ ಪ್ರತಿಭೆ ಗುರುತಿಸಲು ಪ್ರತಿಭಾ ಕಾರಂಜಿ ಉತ್ತಮ ವೇದಿಕೆಯಾಗಿದೆ ಇದನ್ನು ಎಲ್ಲಾ ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಪ್ರತಿಭಾ ಕಾರಂಜಿ ವೇದಿಕೆಗಳಲ್ಲಿ ಮಕ್ಕಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವುದರಿಂದ ಮಕ್ಕಳಲ್ಲಿ ನಾಯಕತ್ವ ಗುಣ ಬೆಳೆಯುತ್ತದೆ ಹಾಗೂ ಆದರ್ಶ ಪುರುಷರ ಜೀವನ ಚರಿತ್ರೆಯ ಸಾರವನ್ನು ತಿಳದುಕೊಂಡು ಉತ್ತಮ ಸಮಾಜ ಕಟ್ಟಲು ಇಂತಹ ವೇದಿಕೆಗಳು ಬಹಳ ಉಪಯೋಗವಾಗುತ್ತವೆ ಎಂದು ಮುಖ್ಯಗುರು ವೀಣಾಬಾಯಿ ಹೇಳಿದರು.

ಈ ಕಾರ್ಯಕ್ರಮದಲ್ಲಿ ಪಿಡಿಒ ನಾಗೇಂದ್ರ, ಶಿಕ್ಷಕ ಛತ್ರಪ್ಪ ಸ್ವಾಗತ ಕೋರಿದರು. ಆಶಾ ಎಸ್.ಕೆ.ನಿರೂಪಿಸಿದರು. ಕಾರ್ಯಕ್ರಮದಲ್ಲಿ ಸನ್ಮಾನವನ್ನು ಚಂದ್ರವತಿ ಮತ್ತು ವಿಜಯಲಕ್ಷ್ಮಿ ನಡೆಸಿಕೊಟ್ಟರು.

ಈ ಸಂಧರ್ಭದಲ್ಲಿ: ಶಾಲೆಯ ಶಿಕ್ಷಕರು, ಅತಿಥಿ ಶಿಕ್ಷಕರು, ಗ್ರಾಮದ ಮುಖಂಡರು, ಅಡುಗೆ ಸಿಬ್ಬಂದಿಗಳು, ವಿದ್ಯಾರ್ಥಿಗಳು, ಇಜೆ ಹೊಸಳ್ಳಿ ವಲಯ ಮಟ್ಟದ ಎಲ್ಲಾ ಶಾಲೆಯ ಮುಖ್ಯಗುರುಗಳು, ಎಸ್.ಡಿ.ಎಮ್.ಸಿ ಸದಸ್ಯರು ಮತ್ತು ಸಹ ಶಿಕ್ಷಕರು ಭಾಗವಹಿಸಿದ್ದರು.

# ಸಾಲದ ಹೊರೆಯಿಂದ ರೈತ ಆತ್ಮಹತ್ಯೆ




**ಬಸವನಬಾಗೇವಾಡಿ ,ನ.22–**ತಾಲೂಕಿನ ಇಂಗಳೇಶ್ವರ ಗ್ರಾಮದ ರೈತ ಬಸಪ್ಪ ಸಿದ್ದಪ್ಪ ಮಿಶಿ ವಯಸ್ಸು 53 ಇವರು ಸಾಲದ ಹೊರೆ ಮಾಡಲಾರದೆ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಮೃತ ರೈತ ಕೃಷಿ ಪತ್ತಿನ ಸೊಸೈಟಿಯಲ್ಲಿ ಸೇರಿ ಇನ್ನೂ ಅನೇಕ ಕಡೆ ಸಾಲವನ್ನು ಮಾಡಿದ ಸಾಲ ತೀರಿಸಲಾಗದೆ ಮನೆಯಲ್ಲಿ ಯಾರೂ ಇಲ್ಲದ ಸಮಯ ಮನೆಯ ಒಳ ಚಿಲಕ ಹಾಕಿಕೊಂಡು ನೇ ನು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಮೃತನ ಪತ್ನಿ ಬಸವನಬಾಗೇವಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ ಈ ಕುರಿತು ಬಸವನಬಾಗವಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ಕಟ್ಟಡ ಕಾರ್ಮಿಕರ ಸಂಘ ಉದ್ಘಾಟನೆ, ಸರ್ಕಾರದ ಸೌಲಭ್ಯ ಸದ್ಬಳಕೆಗೆ ಸೈಯದ್ ಖಾಲಿದ್ ಖಾದ್ರಿ ಕರೆ



ಯುವಮಾರ್ಗ ಸುದ್ದಿ

**ಮಾನ್ವಿ,ನ.22–** ತಾಲೂಕಿನ ಪೋತ್ನಾಳ ಗ್ರಾಮದಲ್ಲಿ 'ನಿತ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘ'ದ ಉದ್ಘಾಟನಾ ಸಮಾರಂಭವು ಇತ್ತೀಚೆಗೆ ಜರುಗಿತು. ಕಾರ್ಯಕ್ರಮವನ್ನು ಸೈಯದ್ ಖಾಲಿದ್ ಖಾದ್ರಿ ಅವರು ಉದ್ಘಾಟಿಸಿದರು.

ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಖಾದ್ರಿ ಅವರು, "ನಿತ್ಯ ಕಟ್ಟಡ ನಿರ್ಮಾಣದ ಕಾಯಕದಲ್ಲಿ ತೊಡಗುವ ಕಾರ್ಮಿಕರು ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಬೇಕು. ಜೊತೆಗೆ ಸರ್ಕಾರದಿಂದ ಕಾರ್ಮಿಕರಿಗೆ ಹಾಗೂ ಅವರ ಮಕ್ಕಳ ಶಿಕ್ಷಣಕ್ಕೆ ಸಿಗುವ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ಮಕ್ಕಳ ಉಜ್ವಲ ಭವಿಷ್ಯ ರೂಪಿಸಬೇಕು," ಎಂದು ಸಲಹೆ ನೀಡಿದರು.

ಕಟ್ಟಡ ಕಟ್ಟುವ ಮೂಲಕ ಸಮಾಜ ನಿರ್ಮಾಣ ಮಾಡುವ ಕಾರ್ಮಿಕರ ಈ ನೂತನ ಸಂಘವು, ಸಮಾಜಮುಖಿ ಕಾರ್ಯಗಳಲ್ಲಿಯೂ ಹೆಜ್ಜೆ ಮುಂದಿಡಲಿ ಎಂದು ನೂತನ ಪದಾಧಿಕಾರಿಗಳಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಫಾದರ್ ಸತೀಶ್ ಫರ್ನಾಂಡಿಸ್, ರಾಜಾ ಸುಭಾಷ್ ಚಂದ್ರ ನಾಯಕ್, ಸತ್ತರ್ ಬಂಗ್ಲೆವಾಲೆ, ಶಬ್ಬೀರ್ ಜಾಲಹಳ್ಳಿ, ಶರ್ಪೊದ್ದಿನ್ ಪೋತ್ನಾಳ, ಚೆನ್ನಪ್ಪ, ಮಾಂತೇಶ್ ನಾಯಕ್, ಈರಣ್ಣ ಹಾಗೂ ಸಂಘದ ಪದಾಧಿಕಾರಿಗಳು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

# ಬೀದಿ ನಾಯಿಗಳ ನಿಯಂತ್ರಣಕ್ಕೆ ಸೂಚನೆ



**ಕವಿತಾಳ,ನ.22–** ಬೀದಿ ನಾಯಿಗಳ ಹಾವಳಿ ನಿಯಂತ್ರಣಕ್ಕೆ ಸರ್ಕಾರಿ ಇಲಾಖೆ ಹಾಗೂ ಖಾಸಗಿ ಸಂಸ್ಥೆಗಳು ಸಹಕರಿಸಬೇಕು ಎಂದು ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಜಸ್‌ಪಾಲ್ ಸಿಂಗ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ್ದು ಸರ್ಕಾರಿ ಮತ್ತು ಖಾಸಗಿ, ಶಾಲಾ, ಕಾಲೇಜು, ಆಸ್ಪತ್ರೆ, ಬಸ್‌ನಿಲ್ದಾಣ, ಖಾಸಗಿ ವಾಣಿಜ್ಯ ಸಂಕೀರ್ಣಗಳು ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಬೀದಿ ನಾಯಿಗಳ ನಿಯಂತ್ರಣಕ್ಕೆ ಸಂಬಂಧಪಟ್ಟ ಇಲಾಖೆ, ಸಂಸ್ಥೆಗಳು ಕಾಳಜಿವಹಿಸಬೇಕು, ಈಕುರಿತು ಸ್ಥಳಿಯ ಆಡ ಳಿತಕ್ಕೆ ಸೂಕ್ತ ಮಾಹಿತಿ ಒದಗಿಸಲು ಸೂಕ್ತ ವ್ಯವಸ್ಥೆ ಕೈಗೊಳ್ಳಬೇಕು, ಬೀದಿ ನಾಯಿಗಳ ಹಾವಳಿ ತಡೆಯುವಲ್ಲಿ ಕಾಳಜಿ ತೋರದ ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳ ವಿರುದ್ಧ ನ್ಯಾಯಾಲಯದ ಅದೇಶದಂತೆ ಕ್ರಮ ಕೈಗೊಳ್ಳಲಾಗುದು ಎಂದು ತಿಳಿಸಿದ್ದಾರೆ.

# ಪಾರಂಪರಿಕ ವೈದ್ಯ ಪದ್ದತಿಯ ಪರವಾಗಿ ಅಧಿವೇಶನದಲ್ಲಿ ಧ್ವನಿ ಎತ್ತಲು ವೈದ್ಯ ಪರಿಷತ್ ಒತ್ತಾಯ



ಯುವಮಾರ್ಗ ಸುದ್ದಿ

**ಲಿಂಗಸುಗೂರು,ನ.22–** ಪಾರಂಪರಿಕ ವೈದ್ಯ ಪದ್ಧತಿಯು ಭಾರತೀಯ ವೈದ್ಯ ಪರಂಪರೆಯ ಮೂಲ ಪದ್ಧತಿಯಾಗಿದ್ದು,ನಮ್ಮ ನಾಟಿ ವೈದ್ಯ ಪದ್ದತಿಯ ಪರವಾಗಿ ನೀವು ಅಧಿವೇಶನದಲ್ಲಿ ಧ್ವನಿ ಎತ್ತಿ ಮಾತನಾಡಿ ಎಂದು ಶಾಸಕರಾದ ಮಾನಪ್ಪ ವಜ್ಜಲ್ ಅವರಿಗೆ ಕಲ್ಯಾಣ ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್ ತಾಲೂಕ ಘಟಕದ ವತಿಯಿಂದ ಮನವಿ ಪತ್ರದ ಮೂಲಕ ಒತ್ತಾಯಿಸಿದರು.

ಈ ಪದ್ಧತಿ ಪ್ರಾಚೀನ ಕಾಲದಿಂದಲು ದೇಶದಲ್ಲಿ ಪಾರಂಪರಿಕ ವೈದ್ಯ ಪದ್ಧತಿ ಇದೆ.ನಮ್ಮ ಪೂರ್ವಜರು ನಾಟಿ ವೈದ್ಯ ಪದ್ದತಿಯ ಮೂಲಕ ಎಷ್ಟೋ ರೋಗಗಳನ್ನು ಗುಣಪಡಿಸಿದ ಉದಾಹರಣೆಗಳು ಇವೆ.ಕೂರೋಣ ಸಂದರ್ಭದಲ್ಲಿ ಕೂಡಾ ನಾವು ಗಿಡಮೂಲಿಕೆಗಳ ಮೊರೆ ಹೋಗಿದ್ದೇವೆ ಆದ್ದರಿಂದ ನಾನು ಬೆಳಗಾವಿಯಲ್ಲಿ ನೆಡೆಯುವ ಚಳಿಗಾಲದ ಅಧಿವೇಶನದಲ್ಲಿ ನಿಮ್ಮ ಪರವಾಗಿ ಧ್ವನಿ ಎತ್ತುತ್ತೆನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ಅಧ್ಯಕ್ಷ ಆನಂದ್ ಹೇರೂರು, ರಾಜ್ಯ ಕಾರ್ಯದರ್ಶಿ ಕುಮಾರಸ್ವಾಮಿ ಕಸಬಾಲಿಂಗಸ್ಗೂರು,ತಾಲೂಕು ಅಧ್ಯಕ್ಷ ಪರಮನಗೌಡ, ಕಾರ್ಯದರ್ಶಿ ಸಹದೇವಪ್ಪ, ರಮೇಶ್ ಎಂ ಮಟ್ಟೂರ, ಮೌನೇಶ್ ಉಪ್ಪೇರಿ,ಹನುಮಂತ್ ಮಟ್ಟೂರು, ದೇವೇಂದ್ರಪ್ಪ ಬಡಿಗೇರ್, ಮೌನೇಶ್ ಬಡಿಗೇರ್, ಸುರೇಶ್ ಮದುಗಲ್, ವಿರೂಪಾಕ್ಷಪ್ಪ, ಹನುಮಂತ್ ರಾಯ ಸೇರಿ ಅನೇಕರು ಇದ್ದರು.

# ತಾಲೂಕಾ ಸ್ಕೌಟ್ಸ್ ಗೈಡ್ಸ್ ಸಮಾವೇಶ



ಯುವಮಾರ್ಗ ಸುದ್ದಿ

**ಮಾನ್ವಿ,ನ.22–**ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಸ್ಕೌಟ್ ಗೈಡ್ ತರಬೇತಿ ಸಹಕಾರಿ ಎಂದು ಜಿಲ್ಲಾ ಸಹಾಯಕ ಆಯುಕ್ತ ಸ್ಕೌಟ್ ಮಲ್ಲನಗೌಡ ನುಡಿದರು.ಅವರು ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ ತಾಲೂಕಾ ಮಟ್ಟದ ಸ್ಕೌಟ್ ಗೈಡ್ ಸಮಾವೇಶ ಹಾಗೂ ಮಾಹಿತಿ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಸಭೆಯ ಅಧ್ಯಕ್ಷತೆಯನ್ನು ಬಲರಾಮ ಕೃಷ್ಣ ಅವರು ವಹಿಸಿದ್ದರು. ವೇದಿಕೆ ಮೇಲೆ ಕಾರ್ಯದರ್ಶಿ ರಾಮಲಿಂಗಪ್ಪ, ಸಲೀಂ, ಚಾಂದ್ ಪಾಷಾ ಅರುಣ್ ಚಂದ,ಜಿಲ್ಲಾ ಸ್ಕೌಟ್ ಆಯುಕ್ತ ಬಸವರಾಜ್, ಗದಗಿನ ,ಉಪಸ್ಥಿತರಿದ್ದರು.

ಪ್ರಾಸ್ತಾವಿಕ ನುಡಿಯನ್ನು ಜಿಲ್ಲಾ ಸಂಘಟಕ್ಕ ಅಂಬಣ್ಣ ನಾಯಕ್ ವ್ಯಾಕಲ್ ಮಾತನಾಡಿದರು.ಮಾನ್ವಿ ಪಬ್ಲಿಕ್ ಶಾಲೆಯ ಕಾರ್ಯದರ್ಶಿ ಸೈಯದ್ ಮುಜಾತನ ಖಾದ್ರಿ, ಸಿರವಾರದ ವೆಂಕಟ ರೆಡ್ಡಿ ಬಲಕಲ್,ನಾಗರತ್ನ ದೇಸಾಯಿ,.ಶಿಬಿರದ ನಾಯಕರಾಗಿ ಚಂದ್ರಶೇಖರ್, ನಾಯಕಿ ಆಗಿ ರಜನಿ,ಪರಿಮಳ,ಸೌಮ್ಯ ಕಾರ್ಯ ನಿರ್ವಹಿಸಿದರು.

# ತುಂಗಭದ್ರಾ ನದಿಯ ಸ್ವಚ್ಛತೆ, ನಮ್ಮೆಲ್ಲರ ಜವಾಬ್ದಾರಿ: ಸಂಚಾಲಕ ಲೋಕೇಶ.



ಯುವಮಾರ್ಗ ಸುದ್ದಿ

**ಸಿಂದನೂರು,ನ.22–**ನದಿಗಳು ಭೂಮಿಯ ಮೇಲಿನ ನೀರಿನ ಪ್ರಾಥಮಿಕ ಮೂಲಗಳಲ್ಲಿ ಒಂದಾಗಿದೆ. ನದಿಗಳು ಕೈಗಾರಿಕೆ, ಕೃಷಿ, ವಿದ್ಯುತ್ ಉತ್ಪಾದನೆ ಸಾರಿಗೆ, ಮೀನುಗಾರಿಕೆಂತಹ ಅನೇಕ ಅಗತ್ಯತೆಗಳಿಗೆ ಮೂಲವಾಗಿದೆ. ಮಾನವರಿಗೆ ಕುಡಿಯಲು ನದಿಗಳು ನೀರನ್ನು ಒದಗಿಸುತ್ತವೆ. ಇಂತಹ

ನದಿಗಳನ್ನು ರಕ್ಷಣೆ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ರಾಷ್ಟ್ರೀಯ ಸ್ವಾಭಿಮಾನ ಆಂದೋಲನ, ನವದೆಹಲಿ ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ ಸಂಚಾಲಕ ಲೋಕೇಶ ಹೇಳಿದರು.

ನಗರದ ಎಲ್.ಬಿ.ಕೆ ಮತ್ತು ನೊಬಲ್ ಪದವಿ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿಗಳಲ್ಲಿ ನದಿಯ ಸ್ವಚ್ಛತೆಯ ಕುರಿತು ಜಾಗೃತಿಯನ್ನು ಮೂಡಿಸಲು ರಾಷ್ಟ್ರೀಯ ಸ್ವಾಭಿಮಾನ ಆಂದೋಲನ, ನವದೆಹಲಿ ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ, ಕರ್ನಾಟಕ ಪರ್ಯಾವರಣ ಟ್ರಸ್ಟ್ ಶಿವಮೊಗ್ಗ ಸಹಯೋಗದಲ್ಲಿ ನಿರ್ಮಲ ತುಂಗಭದ್ರಾ ಅಭಿಯಾನ, ಮೂರನೇ ಹಂತದ ಜಲಜಾಗೃತಿ, ಜನಜಾಗೃತಿ, ಪಾದಯಾತ್ರೆಯಲ್ಲಿ ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ರಾಷ್ಟ್ರಮಟ್ಟದ ಸಂಸ್ಥೆ, ಪ್ರಕೃತಿ ಕೇಂದ್ರಿತವಾದ ವಿಕಾಸ ಮಾಡುವ ತತ್ವದ ಮೇಲೆ ಕಾರ್ಯ ನಿರ್ವಹಿಸುವ ಬೃಹತ್ ಸಂಸ್ಥೆಯಾಗಿದೆ.

ಈ ಸಂಸ್ಥೆ ಚೇರ್ಮನ್ ಗೋವಿಂದ ಆಚಾರ್ಯ, ಸಂಯೋಜಕರು ಮಾಧವನ್ ವೀರಾಪುರ, ಕರ್ನಾಟಕದ ಸಂಯೋಜಕರು ಬಾಲಕೃಷ್ಣ, ನಿರ್ಮಲ ತುಂಗಭದ್ರಾ ಅಭಿಯಾನದ ರಾಜ್ಯದ ಸಂಚಾಲಕರು ದೇಹತ್ ಪಟೇಲ್ ಅವರ ಮಗ ಮಹಿಮಾ ಪಟೇಲ್, ಮೂರು ನದಿಗಳ ಸ್ವಚ್ಛತೆ ಕಡೆ ರಾಷ್ಟಗಳ ಸಂಸ್ಥೆ ಅಡಿಯಲ್ಲಿ ನಾವು ಇವತ್ತು ಈ ದಕ್ಷಿಣ ಭಾರತದಲ್ಲಿ ವಿಶೇಷವಾಗಿ ಕರ್ನಾಟಕದ ಎರಡು ನದಿಗಳು ಕಾವೇರಿ ಮತ್ತು ತುಂಗಭದ್ರಾ, ಕಾವೇರಿ ನದಿ ಬಗ್ಗೆ ಈಗಾಗಲೇ ಸದ್ಗುರುಗಳು ಸ್ವಚ್ಛತೆ ಬಗ್ಗೆ ಕೆಲವು ಕಾರ್ಯಕ್ರಮಗಳನ್ನು ಮಾಡುತ್ತಿದ್ದಾರೆ. ಹಾಗಾಗಿ ಬಹಳ ಪ್ರಮುಖವಾದದ್ದು ತುಂಬಾ ಉದ್ದವಾಗಿ ಹರಿಯುವ ತುಂಗಭದ್ರಾ ನದಿಯ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸಲು ಪಾದಯಾತ್ರೆ ಮಾಡುತ್ತಿದ್ದೇವೆ.

ಈಗಾಗಲೇ ನಾವು ಹಲವು ಮಾರ್ಗದ ಉದ್ದಕ್ಕೂ ನಡೆಸುತ್ತಿದ್ದೇವೆ. ಅನೇಕ ಶಾಲಾ ಕಾಲೇಜಿನ ಮಕ್ಕಳು ಭಾಗವಹಿಸಿದ್ದಾರೆ. ಗ್ರಾ.ಪಂ.ಸದಸ್ಯರು ಅನೇಕ ಪರಿಸರ ಪ್ರೇಮಿಗಳು ಭಾಗವಹಿಸಿದ್ದಾರೆ. ಸೌರವ್ಯೂಹದಲ್ಲಿ ಜೀವಿಗಳನ್ನು ಹೊಂದಿರುವ ಒಂದು ಗ್ರಹ ಭೂಮಿ. ಭೂಮಿಯಲ್ಲಿ ಬದುಕುವಂತಹ ಜೀವರಾಶಿಗಳಿಗೆ ಪಂಚಭೂತಗಳಲ್ಲಿ ಒಂದಾದ ನೀರು ಅತ್ಯವಶ್ಯಕ, ಭೂಮಿಯಲ್ಲಿ 73 ರಷ್ಟು ನೀರು, 27 ಭಾಗದಷ್ಟು ಭೂಭಾಗ ಇದೆ. ನಾವು ಭೂಮಿಯನ್ನು ಖಂಡಗಳಾಗಿ ವಿಭಾಗ ಮಾಡಿದ್ದೇವೆ. ಅದರಲ್ಲಿ ಭಾರತ ವಿಶಿಷ್ಟವಾದ ಸ್ಥಾನವನ್ನು ಗಳಿಸಿಕೊಂಡಿದ್ದೇವೆ.

ನೀರು ನಮ್ಮ ಉಪಯೋಗಕ್ಕೆ 97 ರಷ್ಟು ಬರುವುದಿಲ್ಲ 2 ರಷ್ಟು ಭಾಗ ಹಿಮಾಲಯದಲ್ಲಿ ಹೆಪ್ಪುಗಟ್ಟಿದೆ. ಇನ್ನು ಉಳಿದ 1 ರಷ್ಟು ಭಾಗ ಮಾತ್ರ ಉಪಯೋಗಕ್ಕೆ ಬಳಸುತ್ತಿದ್ದೇವೆ. ಇಂತಹ 1 ರಷ್ಟು ನೀರು ಮಾಲಿನ್ಯಕ್ಕೆ ಒಳಗಾಗಿದೆ. ನೀರಿನ ಬಳಕೆ ಮತ್ತು ಸಮರ್ಪಕದ ಬಗ್ಗೆ ನಾವೆಲ್ಲರೂ ಯೋಚಿಸುವ ಸ್ಥಿತಿಯಲ್ಲಿದ್ದೇವೆ. ನದಿಯ ನೀರನ್ನು ನಾವು ಕೈಗಾರಿಕೆಗಳ ಮೂಲಕ ರಾಸಾಯನಿಕ ವಸ್ತುಗಳಿಂದ ಅಶುದ್ಧಗೊಳಿಸುತ್ತಿದ್ದೇವೆ. ಇದೇ ನದಿಯ ನೀರು ಕೃಷಿಗೂ ಬಳಕೆಯಾಗುತ್ತದೆ. ಆಹಾರದ ಮೂಲಕ ನಮ್ಮೊಳಗೆ ಸೇರಿ ಅನೇಕ ರೋಗಗಳಿಗೆ ಕಾರಣವಾಗುತ್ತದೆ ಎನ್ನುವ ಗಂಭೀರ ಸಂಗತಿಯನ್ನು ಮರೆಯುತ್ತಿದ್ದೇವೆ.

ನಾವು ನದಿಯನ್ನು ಸ್ವಚ್ಛ ಮಾಡದೇನೆ, ತನ್ನಂತ ತಾನೆ ನದಿ ಸ್ವಚ್ಛ ಹಾಗುವುದಿಲ್ಲ. ಏಕ ಬಳಕೆಯ ಪ್ಲಾಸ್ಟಿಕ್ ಬ್ಯಾಗ್, ಇನ್ನಿತರೆ ವಸ್ತುಗಳನ್ನು ಬಳಸುವುದು ಕಡಿಮೆ ಮಾಡಬೇಕು. ಪ್ರತಿ ನಗರ ಊರುಗಳಲ್ಲಿ ಇವತ್ತು ಆಸ್ಪತ್ರೆಗಳು ಹೆಚ್ಚಾಗಿವೆ ಆದರೆ ನೀರು ಶುದ್ಧೀಕರಣ ಘಟಕಗಳು ಇಲ್ಲ. ನೀರಿನ ಶುದ್ದೀಕರಣ ಘಟಕಗಳನ್ನು ಸ್ಥಾಪಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ.

ಎಲ್.ಬಿ.ಕೆ ಮತ್ತು ನೊಬಲ್ ಕಾಲೇಜಿಗೆ ಆಗಮಿಸಿ ತುಂಗಾಭದ್ರಾ ನದಿಯ ಸ್ಥಿತಿಗತಿಯ ಬಗ್ಗೆ ಜಾಗೃತಿ ಮೂಡಿಸುವ ಸಂಚಾಲಕರಿಗೆ ಸನ್ಮಾನಿಸಲಾಯಿತು

ಪರಶುರಾಮ ಮಲ್ಲಾಪುರ ಮಾತನಾಡಿ, ನಮ್ಮ ಕಾಲೇಜಿನ ವಿದ್ಯಾರ್ಥಿಗಳನ್ನು ಈ ಅಭಿಯಾನಕ್ಕೆ ಕಳಿಸುತ್ತೇವೆಂದು ಎಲ್ಲರೂ ಸೇರಿ ತುಂಗಭದ್ರೆಯನ್ನು ಸ್ವಚ್ಛಗೊಳಿಸುವ ನಿಟ್ಟಿನಲ್ಲಿ ಕಾರ್ಯಶೀಲರಾಗೋಣ ಎಂದರು. ಪ್ರಾಸ್ತಾವಿಕವಾಗಿ ಕಾಲೇಜಿನ ಕಾರ್ಯದರ್ಶಿ ಡಾ.ಅರುಣಕುಮಾರ ಬೇರ್ಗಿ ಮಾತನಾಡಿದರು. ಹೊನ್ನಪ್ಪ ಬೆಳಗುರ್ಕಿ, ಎನ್.ಎಸ್.ಎಸ್ ಕಾರ್ಯಕ್ರಮದ ಅಧಿಕಾರಿಗಳು ನಿರೂಪಿಸಿದರು.

ಈ ವೇಳೆ ನೊಬಲ್ ಕಾಲೇಜಿನ ಉಪಾಧ್ಯಕ್ಷ ಶಂಕ್ರಪ್ಪ ಪತ್ತಾರ್, ಎಲ್.ಬಿಕೆ ಕಾಲೇಜಿನ ಪ್ರಿನ್ಸಿಪಾಲ್ ಶಿವಕುಮಾರ ಬಿಂಗಿ, ನೊಬಲ್ ಕಾಲೇಜ ಪ್ರಿನ್ಸಿಪಾಲ್ ಐಶ್ವರ್ಯ ದಳವಾಯಿ, ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H